ಸಂಪುಟ : 11 ಸಂಚಿಕೆ: 07 ಪುಟ : 4+2 ಬೆಲೆ: 3.00 ರವಿವಾರ ಫೆಬ್ರವರಿ 01 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 07 Pages : 4+2 Price : 3.00 Sunday February 01 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಉತ್ಖನನ ಧೂಳಿಗೆ ಮಕ್ಕಳಿಗೆ ಅನಾರೋಗ್ಯ, ಪೋಷಕರ ಆಕ್ರೋಶ!



**■ವಿಜಯಸಾಕ್ಷಿ ಸುದ್ದಿ, ಗದಗ**

ತಾಲೂಕಿನ ಲಕ್ಕುಂಡಿಯಲ್ಲಿ ಉತ್ಖನನ ಕಾರ್ಯದಿಂದ ಉಂಟಾದ ಧೂಳಿನ ಪರಿಣಾಮ ಶಾಲಾ ಮಕ್ಕಳು ತೀವ್ರ ಅನಾರೋಗ್ಯಕ್ಕೆ ಒಳಗಾಗಿರುವ ಆತಂಕಕಾರಿ ಘಟನೆ ಬೆಳಕಿಗೆ ಬಂದಿದೆ.

ಲಕ್ಕುಂಡಿ ಕೋಟೆಯ ವೀರಭದ್ರೇಶ್ವರ ದೇವಸ್ಥಾನದ ಆವರಣದಲ್ಲಿ ಇರುವ ಸ್ವಾಮಿ ವಿವೇಕಾನಂದ ಖಾಸಗಿ ಶಾಲೆಯ ಎಲ್‌ಕೆಜಿ ಹಾಗೂ ಯುಕೆಜಿ ತರಗತಿಯ ಪುಟ್ಟಪುಟ್ಟ ಮಕ್ಕಳು ಉತ್ಖನನ ಧೂಳಿನಿಂದ ಅಸ್ವಸ್ಥರಾಗಿದ್ದಾರೆ.

ಧೂಳಿನ ಪರಿಣಾಮ ಮಕ್ಕಳಿಗೆ ವಾಂತಿ, ಜ್ವರ ಹಾಗೂ ಉಸಿರಾಟದ ತೊಂದರೆ ಕಾಣಿಸಿಕೊಂಡಿದ್ದು, ಹಲವು ಮಕ್ಕಳು ಡಸ್ಟ್ ಅಲರ್ಜಿಯಿಂದ ನರಳುತ್ತಿದ್ದಾರೆ. ಅನಾರೋಗ್ಯದ ಕಾರಣದಿಂದಾಗಿ ಕೆಲ ವಿದ್ಯಾರ್ಥಿಗಳು ಶಾಲೆಗೆ ಹಾಜರಾಗಲು ಸಾಧ್ಯವಾಗಿಲ್ಲ.

ಉತ್ಖನನದಿಂದ ನಿರಂತರವಾಗಿ ಏಳುತ್ತಿರುವ ಧೂಳು ಮಕ್ಕಳ ಆರೋಗ್ಯಕ್ಕೆ ಗಂಭೀರ ಅಪಾಯ ತಂದೊಡ್ಡಿದೆ ಎಂಬ ಆರೋಪ ಪೋಷಕರಿಂದ ಕೇಳಿಬಂದಿದೆ. ಶಾಲಾ ಆವರಣದ ಬಳಿ ಯಾವುದೇ ಸುರಕ್ಷತಾ ಕ್ರಮ ಕೈಗೊಳ್ಳದೇ ಉತ್ಖನನ ನಡೆಸುತ್ತಿರುವ ಅಧಿಕಾರಿಗಳ ವಿರುದ್ಧ ಪೋಷಕರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

"ಪುಟ್ಟ ಮಕ್ಕಳ ಆರೋಗ್ಯದ ಬಗ್ಗೆ ಯಾರಿಗೂ ಕಾಳಜಿ ಇಲ್ಲವೇ?" ಎಂದು ಪ್ರಶ್ನಿಸಿರುವ ಪೋಷಕರು, ತಕ್ಷಣವೇ ಉತ್ಖನನ ಕಾರ್ಯ ನಿಲ್ಲಿಸಿ ಮಕ್ಕಳಿಗೆ ಸುರಕ್ಷಿತ ವಾತಾವರಣ ಒದಗಿಸುವಂತೆ ಆಗ್ರಹಿಸಿದ್ದಾರೆ. ಘಟನೆ ಕುರಿತು ಸಂಬಂಧಿಸಿದ ಅಧಿಕಾರಿಗಳು ಸ್ಪಷ್ಟನೆ ನೀಡಬೇಕಿದ್ದು, ಮಕ್ಕಳ ಆರೋಗ್ಯದ ರಕ್ಷಣೆಗಾಗಿ ತುರ್ತು ಕ್ರಮ ಕೈಗೊಳ್ಳಬೇಕಾದ ಅವಶ್ಯಕತೆ ಎದುರಾಗಿದೆ.

### ಹಿಂದೂ ಸಮಾಜೋತ್ಸವ, ಶೋಭಾಯಾತ್ರೆಯ ದಿಕ್ಸೂಚಿ ಭಾಷಣದಲ್ಲಿ ಕೃಷ್ಣಜೀ ಜೋಶಿ

# ಹಿಂದೂ ಸಮಾಜದಲ್ಲಿ ಗಟ್ಟಿತನ ಬೇಕು

**■ವಿಜಯಸಾಕ್ಷಿ ಸುದ್ದಿ, ಗದಗ**

ಸಂಗೀತದಲ್ಲಿ ದೃಷ್ಟಿ, ಜೀವನ ನೀಡಿದ ಕ್ಷೇತ್ರ ಗದಗ. ಸಂಸ್ಕೃತಿ ಬಿಂಬಿಸುವ ನಗರದಲ್ಲಿ ಹಿಂದೂ ಸಮಾಜೋತ್ಸವ ಶೋಭಾಯಾತ್ರೆ ನಡೆಯುತ್ತಿರುವುದು ಸ್ವಾಗತಾರ್ಹ. ರಾಷ್ಟ್ರೀಯ ಸ್ವಯಂ ಸೇವಕ ಸಂಘದ 100ನೇ ವಾರ್ಷಿಕೋತ್ಸವದ ಹಿನ್ನೆಲೆಯಲ್ಲಿ ಹಿಂದೂ ಸಮಾಜ ಜಾಗೃತವಾಗಿರಬೇಕು ಎಂಬ ಉದ್ದೇಶದಿಂದ ಈ ಯಾತ್ರೆ ನಡೆಸಲಾಗುತ್ತಿದೆ ಎಂದು ಕರ್ನಾಟಕ ಉತ್ತರ ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಪ್ರಚಾರ ಪ್ರಮುಖ ಕೃಷ್ಣಜೀ ಜೋಶಿ ಹೇಳಿದರು.

ಗದುಗಿನ ಕಿತ್ತೂರು ರಾಣಿ ಚೆನ್ನಮ್ಮ ನಗರದಲ್ಲಿ ಶನಿವಾರ ಸಂಜೆ ಜರುಗಿದ ಹಿಂದೂ ಸಮಾಜೋತ್ಸವ, ಶೋಭಾಯಾತ್ರೆಯಲ್ಲಿ ದಿಕ್ಸೂಚಿ ಭಾಷಣ ಮಾಡಿದ ಅವರು, ಹಿಂದೂಗಳು ಸಂವಿಧಾನ ಹಕ್ಕಿನ ಜೊತೆಗೆ ಕರ್ತವ್ಯಗಳನ್ನು ಪಾಲಿಸಬೇಕು.



ಅದರಲ್ಲಿ ನಾಗರಿಕ ಕರ್ತವ್ಯ ಮುಖ್ಯವಾಗಿದೆ ಎಂದರು.

ವಿಶ್ವದಲ್ಲಿ ನಾಗರಿಕತೆ ಇಲ್ಲದ ಸಂದರ್ಭದಲ್ಲಿ ಭಾರತದಲ್ಲಿ ನಾಗರಿಕ ಸಂಸ್ಕೃತಿ ಉಚ್ಛ್ರಾಯ ಸ್ಥಿತಿಯಲ್ಲಿತ್ತು. ಹಿಂದೂ ಸಮಾಜದಿಂದ ಭಾರತ ಜಗತ್ತಿಗೇ ಗುರುವಾಗಿತ್ತು. ಆದರೆ, 1093ರಲ್ಲಿ ಪೃಥ್ವಿರಾಜ ಚವ್ಹಾಣನನ್ನು ಸೋಲಿಸಿ ಮಹಮ್ಮದ ಘೋರಿ ದೆಹಲಿಯಲ್ಲಿ ಆಳ್ವಿಕೆ ಮಾಡಿದ. ಆದರೆ ಪೃಥ್ವಿರಾಜ ಚವ್ಹಾಣ ಸೋಲುವುದಕ್ಕೆ ಅವನ ಮಾವ ಜಯಚಂದನೇ ಕಾರಣ. ಅದೇ ರೀತಿ ಕಿತ್ತೂರು ಸಂಸ್ಥಾನದ ಆಳ್ವಿಕೆಯೂ ಕೊನೆಗೊಂಡಿತು. ಇತಿಹಾಸಲ್ಲಿ ನಮ್ಮ ಅಧಃಪತನಕ್ಕೆ ಹಿಂದೂಗಳೇ ಕಾರಣ. ನಾವು ಹಿಂದೂ, ನಾವೆಲ್ಲ ಒಂದು ಎನ್ನುವುದು ಯಾವಾಗ ಎಂದು ಪ್ರಶ್ನಿಸಿದರಲ್ಲದೆ, ನಮ್ಮ ಸಮಾಜದಲ್ಲಿ ಗಟ್ಟಿತನ ಬೇಕು. ಗಟ್ಟಿತನವೇ ನಾವು ಭವಿಷ್ಯದಲ್ಲಿ ಹಿಂದೂಗಳಾಗಿ ಉಳಿಯಲು ಕಾರಣವಾಗುತ್ತದೆ ಎಂದು ಹೇಳಿದರು.

ಕಾರ್ಯಕ್ರಮದ ಸಾನ್ನಿಧ್ಯ ವಹಿಸಿದ್ದ ವೀರೇಶ್ವರ ಪುಣ್ಯಾಶ್ರಮದ ಕಲ್ಲಯ್ಯಜ್ಜನವರು ಮಾತನಾಡಿ, ತಾಯಿ ಮತ್ತು ಭೂಮಿಗೆ ಗೌರವ ನೀಡಬೇಕು. ಭರತ ಖಂಡಕ್ಕೆ ಅಗೌರವ ತೋರಿದರೆ ತಾಯಿಗೆ ಅಗೌರವ ತೋರಿದಂತೆ ಎಂದರು. ಮುಕ್ತಣ್ಣೆಶ್ವರ ಮಠದ ಶಂಕರಾನಂದ ಶ್ರೀಗಳು, ಅಡ್ನೂರು ಮಠದ ಪಂಚಾಕ್ಷರಿ ಶಿವಾಚಾರ್ಯ ಶ್ರೀಗಳು, ಹಿಂದೂ ಸಮಾಜೋತ್ಸವ ಅಧ್ಯಕ್ಷ ಬಸವರಾಜ ಬಿಂಗಿ, ಹಿಂದೂ ಸಮಾಜೋತ್ಸವ ಸಮಿತಿ ಉಪಾಧ್ಯಕ್ಷ ಕೇಶವರಾಮ್ ಕೊಳ್ಳಿ, ಸಂಘಟನಾ ಕಾರ್ಯದರ್ಶಿ ಜಗದೀಶ್ ಎಸ್.ಪಿ, ಚಿನ್ಮಯಾನಂದ ಟೆಂಗಿನಕಾಯಿ, ಶಶಿಧರ ದಿಂಡೂರ, ರಘುನಾಥಸಾ ಮೇರವಾಡೆ, ರಾಜಣ್ಣ ಮಲ್ಲಾಡದ, ಮಂಜುನಾಥ ಕೊಟ್ನಿಕಲ್, ಚಂದ್ರಕಾಂತ ಚವ್ಹಾಣ, ಪ್ರೇಮಾ ಕಡೆಮನಿ, ಕಾರ್ಯದರ್ಶಿ ಪ್ರಕಾಶ ಉಗಲಾಟದ, ಶೈಲೇಶ್ ಬಾಗಮಾರ, ಹರೀಶ ಪೂಜಾರ, ರಾಜಶೇಖರ ಕುಂಬಿ, ನಾಗವೇಣಿ ಕಟ್ಟಿಮನಿ, ಡಾ. ಉಮೇಶ ಹಾದಿ, ಚಿನ್ಮಯಾನಂದ ಟೆಂಗಿನಕಾಯಿ ಮುಂತಾದವರಿದ್ದರು.

ಬೃಹತ್ ಹಿಂದೂ ಸಮ್ಮೇಳನದ ಶೋಭಾಯಾತ್ರೆಗೆ ವೀರೇಶ್ವರ ಪುಣ್ಯಾಶ್ರಮದ ಪಿಠಾಧಿಪತಿ ಡಾ.ಕಲ್ಲಯ್ಯಜ್ಜನವರು ಚಾಲನೆ ನೀಡಿದರು. ನಗರದ ವೀರೇಶ್ವರ ಪುಣ್ಯಾಶ್ರಮ ಪಂಡಿತ ಪುಟ್ಟರಾಜ ಕವಿ ಗವಾಯಿಗಳ ಮಠದಿಂದ ಶೋಭಾಯಾತ್ರೆ ಆರಂಭವಾಗಿ ವೆಂಕಟೇಶ ಟಾಕೀಸ್ ರಸ್ತೆ, ಟ್ಯಾಗೋರ್ ರಸ್ತೆ, ಕಿತ್ತೂರಾಣಿ ಚೆನ್ನಮ್ಮ ರಸ್ತೆ, ಹಾತಲಗೇರಿ ನಾಕಾ, ಸಾಯಿಬಾಬಾ ದೇವಸ್ಥಾನದಿಂದ ಮಾಳೇಕೊಪ್ಪಮಠ ಅವರ ಬಯಲು ಜಾಗೆಯವರೆಗೆ ಸಂಚರಿಸಿತು. ದೇಶಭಕ್ತಿಗೀತೆಗಳೊಂದಿಗೆ ರಾಷ್ಟ್ರ ಭಕ್ತರ ಭವ್ಯ ಭಾವಚಿತ್ರದ ಮೆರವಣಿಗೆ ರೋಮಾಂಚನ ತರಿಸಿತು. ಸಮ್ಮೇಳನದ ಹಿನ್ನೆಲೆಯಲ್ಲಿ ಇಡೀ ನಗರದಾದ್ಯಂತ ಭಾಗವಾದ್ವಜಗಳು, ಬ್ಯಾನರ್‌ಗಳಿಂದ ನಗರಕ್ಕೆ ನಗರವೇ ಕೇಸರಿ ಬಣ್ಣದಲ್ಲಿ ಕಂಗೊಳಿಸಿತು. ಅವಳಿ ನಗರದ ವಿವಿಧ ಕಡೆ ಶೋಭಾಯಾತ್ರೆಯನ್ನು ಸಂಭ್ರಮದಿಂದ ಸ್ವಾಗತಿಸಿದರು.

## ಲಕ್ಕುಂಡಿಯ ಐತಿಹಾಸಿಕ ದೇವಸ್ಥಾನಗಳ ಅಭಿವೃದ್ಧಿಗೆ 10 ಕೋಟಿ: ಡಿಸಿ ಸಿ.ಎನ್. ಶ್ರೀಧರ್



**■ವಿಜಯಸಾಕ್ಷಿ ಸುದ್ದಿ, ಗದಗ**

ಲಕ್ಕುಂಡಿಯ ಐತಿಹಾಸಿಕ ದೇವಸ್ಥಾನಗಳ ಸಂರಕ್ಷಣೆ ಮತ್ತು ಅಭಿವೃದ್ಧಿಗೆ ಸಂಬಂಧಿಸಿ ಗದಗ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅವರು ಇಂದು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ರಾಜ್ಯ ಮತ್ತು ಕೇಂದ್ರ ಪುರಾತತ್ವ ಇಲಾಖೆಗೆ ಒಳಪಡುವ ಪ್ರಮುಖ ದೇವಸ್ಥಾನಗಳನ್ನು ಡಿಸಿ ಪರಿಶೀಲಿಸಿ ಅಧಿಕಾರಿಗಳೊಂದಿಗೆ ಚರ್ಚಿಸಿದರು.

ಲಕ್ಕುಂಡಿಯ ಐತಿಹಾಸಿಕ ಕುಂಭಾರೇಶ್ವರ ದೇವಸ್ಥಾನಕ್ಕೆ ಹೊಂದಿಕೊಂಡಿರುವ ಮನೆಗಳ ಶೀಘ್ರ ಸ್ಥಳಾಂತರಕ್ಕೆ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಡಿಸಿ ತಿಳಿಸಿದ್ದಾರೆ.

ಈ ಕಾರ್ಯವನ್ನು ಕೇಂದ್ರ ಪುರಾತತ್ವ ಇಲಾಖೆ (ಎಎಸ್‌ಐ) ಮೂಲಕ ನಡೆಸಲಾಗುವುದು. ಈಗಾಗಲೇ ಸ್ಥಳಾಂತರಕ್ಕೆ ಸಂಬಂಧಿಸಿದಂತೆ ಪರಿಹಾರವನ್ನು ನೀಡಲಾಗಿದೆ ಎಂದು ಅವರು ಸ್ಪಷ್ಟಪಡಿಸಿದರು.

"ಕೇಂದ್ರ ಪುರಾತತ್ವ ಇಲಾಖೆಯ ಅಧಿಕಾರಿಗಳ ಜೊತೆ ಮಾತನಾಡಿ ಮನೆಗಳನ್ನು ಖಾಲಿ ಮಾಡಿಸಲಾಗುತ್ತದೆ. ▸▸3ನೇ ಪುಟಕ್ಕೆ

### ಪಿ.ಎಂ-ಎಸ್.ವೈ.ಎಂ ಯೋಜನೆಯಡಿ ವಿವಿಧ ಅಸಂಘಟಿತ ಕಾರ್ಮಿಕರ ನೋಂದಣಿಗೆ ಅಭಿಯಾನ

# ಅಸಂಘಟಿತ ವಲಯ ಕಾರ್ಮಿಕರಿಗೆ ಪಿಂಚಣಿ ಯೋಜನೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಅಸಂಘಟಿತ ವಲಯದ ಕಾರ್ಮಿಕರಿಗೆ ಅವರ ವೃದ್ಧಾಪ್ಯದ ಸಮಯದಲ್ಲಿ ಸಾಮಾಜಿಕ ಭದ್ರತೆ ಕಲ್ಪಿಸಲು ಕೇಂದ್ರ ಸರ್ಕಾರವು ಪ್ರಧಾನಮಂತ್ರಿ ಶ್ರಮ್ ಯೋಗಿ ಮಾನ್-ಧನ್ (ಪಿಎಂ-ಎಸ್‌ವೈಎಂ) ಎಂಬ ಮಹತ್ವಾಕಾಂಕ್ಷಿ ವಂತಿಗೆ ಆಧಾರಿತ ಪಿಂಚಣಿ ಯೋಜನೆ ಜಾರಿಗೆ ತಂದಿದೆ. ಈ ಸೌಲಭ್ಯವನ್ನು ಅಸಂಘಟಿತ ವಲಯದ ಕಾರ್ಮಿಕರು ಪಡೆದುಕೊಳ್ಳುವಂತಾಗಬೇಕೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಶನಿವಾರ ಪ್ರಧಾನಮಂತ್ರಿ ಶ್ರಮ ಯೋಗಿ ಮಾನ್-ಧನ್ ಯೋಜನೆಯಡಿ ವಿವಿಧ ಅಸಂಘಟಿತ ಕಾರ್ಮಿಕರನ್ನು ನೋಂದಣಿ ಮಾಡುವುದಕ್ಕಾಗಿ ಜಿಲ್ಲಾದ್ಯಂತ ವಿಶೇಷ ಅಬಿಯಾನವನ್ನು ನಡೆಸುವ ಕುರಿತು ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.



ಫಲಾನುಭವಿಯು ನಿರಂತರವಾಗಿ ವಂತಿಗೆಯನ್ನು ಪಾವತಿಸಿದ್ದು, ಅವರು 60 ವರ್ಷದ ಒಳಗಾಗಿ ಮೃತಪಟ್ಟಲ್ಲಿ ಅಥವಾ ಶಾಶ್ವತ ಅಂಗ ನ್ಯೂನತೆಯಿಂದ ವಂತಿಕೆಯನ್ನು ಪಾವತಿಸಲು ಸಾಧ್ಯವಾಗದಿದ್ದಲ್ಲಿ ಅವನ/ಅವಳ ಸಂಗಾತಿಯು ಈ ಯೋಜನೆಗೆ ಸೇರಬಹುದಾಗಿದ್ದು, ವಂತಿಗೆಯನ್ನು ಪಾವತಿಸಿ ಮುಂದುವರಿಸಬಹುದಾಗಿದೆ ಅಥವಾ ಅವರ ವಂತಿಗೆಯನ್ನು ಬಡ್ಡಿಯೊಂದಿಗೆ ಪಡೆಯಲು ಅರ್ಹರು. ಪಿಂಚಣಿ ಆರಂಭಗೊಂಡ ನಂತರ ಚಂದಾದಾರರು ಮೃತಪಟ್ಟಲ್ಲಿ ಅವರ ಪತ್ನಿ/ಪತಿ ಮಾತ್ರ ಪಿಂಚಣಿಯ ಶೇ. 50ರಷ್ಟು ಪಿಂಚಣಿಯನ್ನು ಪಡೆಯಲು ಅರ್ಹರಾಗಿರುತ್ತಾರೆ.

ಈ ಯೋಜನೆಯ ಸೌಲಭ್ಯದ ಸದ್ಬಳಕೆಯಾಗಬೇಕೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ಜಿಲ್ಲಾ ಕಾರ್ಮಿಕ ಅಧಿಕಾರಿ ಶ್ರೀಶೈಲ ಸೋಮನಕಟ್ಟಿ ಮಾತನಾಡಿ, ಪಿ.ಎಂ-ಎಸ್.ವೈ.ಎಂ ಯೋಜನೆಗೆ ಒಳಪಡುವ ಕಾರ್ಮಿಕರು ಅಸಂಘಟಿತ ವಲಯದ ಕಾರ್ಮಿಕರಾಗಿದ್ದು, 18ರಿಂದ 40 ವರ್ಷದೊಳಗಿರಬೇಕು. ಗದಗ ಜಿಲ್ಲೆಯಲ್ಲಿನ 7275 ಅಸಂಘಟಿತ ಕಾರ್ಮಿಕರಿಗೆ ಈ ಯೋಜನೆಯಡಿ ನೋಂದಣಿ ಮಾಡುವ ಗುರಿ ನಿಗದಿಪಡಿಸಲಾಗಿದೆ. ಅವರ ಮಾಸಿಕ ಆದಾಯ ರೂ.15 ಸಾವಿರ ಅಥವಾ ಅದಕ್ಕಿಂತ ಕಡಿಮೆ ಇರಬೇಕು. ಅವರ ಆದಾಯ ತೆರಿಗೆ /ಇ.ಎಸ್.ಐ/ ಪಿ.ಎಫ್./ ಎನ್.ಪಿ.ಎಸ್ ಯೋಜನೆಯ ವ್ಯಾಪ್ತಿಗೆ ಒಳಪಟ್ಟಿರಬಾರದು. ಬ್ಯಾಂಕ್ ಉಳಿತಾಯ ಖಾತೆ ಮತ್ತು ಆಧಾರ್ ಸಂಖ್ಯೆ ಹೊಂದಿರಬೇಕು ಎಂದರು. ಅರ್ಹ ಅಸಂಘಟಿತ ಕಾರ್ಮಿಕರು ಹತ್ತಿರದ ಕಾಮನ್ ಸರ್ವಿಸ್ ಸೆಂಟರ್ (ಸಿಎಸ್‌ಸಿ)ಗಳಲ್ಲಿ ಯೋಜನೆಯಡಿ ಫಲಾನುಭವಿಗಳಾಗಿ ನೋಂದಾಯಿಸಬಹುದು. ಸಿ.ಎಸ್.ಸಿ.ಗಳ ವಿವರಗಳನ್ನು ಹತ್ತಿರದ ಎಲ್.ಐ.ಸಿ ಶಾಖೆಗಳು, ಕಾರ್ಮಿಕ ಇಲಾಖೆ, ಕೇಂದ್ರ ಸರ್ಕಾರದ ಕಾರ್ಮಿಕ ಇಲಾಖೆ, ಇ.ಎಸ್.ಐ, ಕಾರ್ಪೋರೇಷನ್ ಹಾಗೂ ಭವಿಷ್ಯ ನಿಧಿ ಸಂಘಟನೆಯ ಕಚೇರಿಗಳು ಹಾಗೂ ಇಲಾಖೆಯ ವೆಬ್‌ವಿಳಾಸಗಳು ಹಾಗೂ ವೆಬ್ ವಿಳಾಸ http://locator.osccloud.in ಗಳಲ್ಲಿ ಪಡೆಯಬಹುದಾಗಿದೆ. ಈ ಯೋಜನೆಯು ವಿದ್ಯುನ್ಮಾನ ಆಧಾರಿತವಾಗಿದ್ದು, ಎಸ್.ಎಂ.ಎಸ್ ಮೂಲಕ ಎಲ್ಲ ವ್ಯವಹಾಗಳ ಮಾಹಿತಿಯನ್ನು ಫಲಾನುಭವಿಗೆ ಕಾಲಕಾಲಕ್ಕೆ ತಿಳಿಸಲಾಗುವುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ನಿರೂಪಣಾಧಿಕಾರಿ ರಾಧಾ ಮಣ್ಣೂರ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕ ವಸಂತ ಮಡ್ಲೂರ, ಕೌಶಲ್ಯಾಭಿವೃದ್ಧಿ ಇಲಾಖೆಯ ಸಹಾಯಕ ನಿರ್ದೇಶಕ ಬಸವರಾಜ ಮಲ್ಲೂರ, ಸಹಾಯಕ ಕೃಷಿ ನಿರ್ದೇಶಕ ರಮೇಶ ನಾಯ್ಕ, ಕಾರ್ಮಿಕ ಇಲಾಖೆಯ ಸಂದೇಶ ಪಾಟೀಲ ಸೇರಿದಂತೆ ಇತರರು ಹಾಜರಿದ್ದರು.

ಅಸಂಘಟಿತ ಕಾರ್ಮಿಕರಿಗೆ ಅವರ ಜೀವನ ಸಂಧ್ಯಾಕಾಲದಲ್ಲಿ ದುಡಿದು ತಮ್ಮನ್ನು ಪೋಷಿಸಿಕೊಳ್ಳಲು ಆರ್ಥಿಕ ಮೂಲಗಳು ಇರುವುದಿಲ್ಲ. ಇಂತಹ ಅಸಂಘಟಿತ ಕಾರ್ಮಿಕರಿಗೆ ವಂತಿಗೆ ಆಧಾರಿತ ಈ ಪಿಂಚಣಿ ಯೋಜನೆ ಸಹಕಾರಿಯಾಗಲಿದೆ. ಕೇಂದ್ರ ಸರ್ಕಾರವು ಚಂದಾದಾರರು ಪಾವತಿಸುವ ವಂತಿಗೆಗೆ ಸಮಾನಾಂತರ ವಂತಿಗೆಯನ್ನು ಪಿಂಚಣಿ ಖಾತೆಗೆ ಪಾವತಿಸುತ್ತದೆ. ಫಲಾನುಭವಿಯ ವಯಸ್ಸು 60 ವರ್ಷ ಪೂರ್ಣಗೊಂಡ ನಂತರ ತಿಂಗಳಿಗೆ 3 ಸಾವಿರ ರೂ.ಗಳ ಖಚಿತ ಕನಿಷ್ಟ ಮಾಸಿಕ ಪಿಂಚಣಿಯನ್ನು ಪಡೆಯಲು ಅರ್ಹರಾಗುತ್ತಾರೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

### ರಾಜ್ಯ ವಿಕೇಂದ್ರೀಕರಣ ಯೋಜನೆಯ ತಾಲೂಕು ಮಟ್ಟದ ಚಿಂತನ-ಮಂಥನ ಸಭೆ

# ಸ್ಥಳೀಯ ಆಡಳಿತ ಜನರಿಗೆ ಹತ್ತಿರವಾಗಬೇಕು




**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಜನರಿಂದಲೇ ರೂಪಿಸಿದ ಯೋಜನೆಯನ್ವಯ ರಾಜ್ಯದ ಆಯವ್ಯಯ ತಯಾರಾಗಬೇಕು. ಆ ಮೂಲಕ ಮಹಾತ್ಮ ಗಾಂಧೀಜಿಯವರ ಗ್ರಾಮ ಸ್ವರಾಜ್ಯದ ಕನಸು ನನಸಾಗಬೇಕು ಎಂದು ಕರ್ನಾಟಕ ರಾಜ್ಯ ವೀಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಡಿ.ಆರ್. ಪಾಟೀಲ ಆಶಿಸಿದರು.

ಅವರು ಶನಿವಾರ ಪಟ್ಟಣದ ತಾ.ಪಂ ಸಭಾಭವನದಲ್ಲಿ 2027-28ನೇ ಸಾಲಿನ ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯನ್ನು ಜನಪರ ಯೋಜನೆಯನ್ನಾಗಿಸುವ ಕುರಿತು ಜಿ.ಪಂ, ತಾ.ಪಂ, ಗ್ರಾ.ಪಂ ಹಾಗೂ ತಾಲೂಕು ಯೋಜನಾ ಮತ್ತು ಅಭಿವೃದ್ಧಿ ಸಮಿತಿ ಇವರ ಸಹಯೋಗದಲ್ಲಿ ನಡೆಸಿದ ತಾಲೂಕು ಮಟ್ಟದ ಚಿಂತನ-ಮಂಥನ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಅಧಿಕಾರ ವಿಕೇಂದ್ರೀಕರಣ ಮತ್ತು ಪಂಚಾಯತ್ ರಾಜ್ ವ್ಯವಸ್ಥೆಯಲ್ಲಿ ಆಮೂಲಾಗ್ರ ಬದಲಾವಣೆ ಮತ್ತು ▸▸2ನೇ ಪುಟಕ್ಕೆ

ದೇಶದ ಅಭಿವೃದ್ಧಿಗೆ ಗ್ರಾಮಗಳ ಅಭಿವೃದ್ಧಿ ಪೂರಕವಾಗಿದೆ. ಗ್ರಾಮ ಸಭೆಗಳಲ್ಲಿಯೂ ಬಜೆಟ್ ಬಗ್ಗೆ ಚರ್ಚೆ ಆಗಬೇಕು. 2027-28ರ ಆರ್ಥಿಕ ವರ್ಷದ ಅಭಿವೃದ್ಧಿ ಯೋಜನೆಗಳನ್ನು ಜನರ ಅಪೇಕ್ಷೆಯಂತೆ ರೂಪಿಸಬೇಕು. ಸ್ಥಳೀಯ ಸಂಸ್ಥೆಗಳು ಸ್ಥಳೀಯ ಸರ್ಕಾರವೇ ಆಗಿದ್ದು, ಅವಕ್ಕೆ ಪ್ರತ್ಯೇಕ ಅನುದಾನ ಸಿಗಬೇಕು. ಜನರ, ಜನಪ್ರತಿನಿಧಿಗಳ ಮತ್ತು ಅಧಿಕಾರಿಗಳ ಸಹಭಾಗಿತ್ವದಲ್ಲಿ ಅಭಿವೃದ್ಧಿ ಕಾರ್ಯಗಳು ನಡೆಯವಂತಾಗಿ ಗ್ರಾಮಗಳು ಸ್ವಾವಲಂಬಿಯಾಗಿ ಬೆಳೆಯಬೇಕು ಎಂದು ಡಿ.ಆರ್. ಪಾಟೀಲ ಹೇಳಿದರು.

### ಆರ್‌ಜಿಎಸ್ ಶಿಕ್ಷಣ ಸಂಸ್ಥೆಯ ವಿದ್ಯಾರ್ಥಿ ಸಂಘದ ಉದ್ಘಾಟನೆ ನೆರವೇರಿಸಿದ ಡಾ. ಪ್ರಭುಗೌಡ


# ವಿದ್ಯಾರ್ಥಿ ಜೀವನದಲ್ಲಿ ಸಮಯವೇ ಸಂಪತ್ತು

**■ವಿಜಯಸಾಕ್ಷಿ ಸುದ್ದಿ, ರೋಣ**

ಶಿಕ್ಷಣ ಎನ್ನುವುದು ಸಮುದ್ರವಿದ್ದಂತೆ. ಅದನ್ನು ಅರಗಿಸಿಕೊಂಡು ಸಮಾಜದಲ್ಲಿ ಸುಂದರ ಬದುಕನ್ನು ನಿರ್ಮಿಸಿಕೊಳ್ಳಬೇಕು ಎಂದು ಧಾರವಾಡದ ಕರ್ನಾಟಕ ಕಾಲೇಜಿನ ನಿವೃತ್ತ ಪ್ರಾಧ್ಯಾಪಕ ಡಾ. ಪ್ರಭುಗೌಡ ಪೊಲೀಸ್‌ಪಾಟೀಲ ಹೇಳಿದರು.

ಅವರು ಶನಿವಾರ ಪಟ್ಟಣದ ಆರ್‌ಜಿಎಸ್ ಶಿಕ್ಷಣ ಸಂಸ್ಥೆಯ ಬಿಇಡಿ 2025-26ನೇ ಶೈಕ್ಷಣಿಕ ಸಾಲಿನ ವಿದ್ಯಾರ್ಥಿ ಸಂಘದ ಉದ್ಘಾಟನೆ ಹಾಗೂ ಪ್ರಥಮ ವರ್ಷದ ಪ್ರಶಿಕ್ಷಣಾರ್ಥಿಗಳ ಸ್ವಾಗತ ಸಮಾರಂಭದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ವಿದ್ಯಾರ್ಥಿ ಜೀವನದಲ್ಲಿ ಸಮಯ ಅತ್ಯಂತ ಮುಖ್ಯವಾಗಿದೆ ಎನ್ನುವುದನ್ನು ಅರಿತಾಗ ಮಾತ್ರ ಜೀವನದಲ್ಲಿ ಯಶಸ್ಸು ಸಾಧಿಸಲು ಸಾಧ್ಯ. ಜ್ಞಾನ ಪಡೆಯುವ




ಸಂದರ್ಭದಲ್ಲಿ ಕಾಲಹರಣ ಮಾಡಿದರೆ ಜೀವನ ವ್ಯರ್ಥವಾದಂತೆ. ವಿದ್ಯಾರ್ಥಿಗಳಿದ್ದಾಗ ಅಭ್ಯಾಸದ ಕಡೆಗೆ ಹೆಚ್ಚಿನ ಗಮನ ಹರಿಸಬೇಕು. ವಿದ್ಯಾರ್ಥಿಗಳು ಸಮಯಕ್ಕೆ ಹೆಚ್ಚಿನ ಮಹತ್ವ ಕೊಟ್ಟು ಜ್ಞಾನ ಸಂಪಾದಿಸಬೇಕು ಎಂದರು.

ತೋಟಗಾರಿಕೆ ಇಲಾಖೆಯ ನಿವೃತ್ತ ಸಹಾಯಕ ನಿರ್ದೇಶಕ ಸುರೇಶ ಕುಂಬಾರ ಮಾತನಾಡಿ, ಸರಕಾರಿ ನೌಕರಿ ಪಡೆಯಬೇಕು ಎಂಬ ಉದ್ದೇಶದಿಂದಲೇ ನಾವು ಶಿಕ್ಷಣ ಪಡೆಯುತ್ತೇವೆ. ಆದರೆ, ನೌಕರಿ ಸಿಗದಿದ್ದಾಗ ಹತಾಶರಾಗುವ ಬದಲು ತಮ್ಮ ಮನಸ್ಸನ್ನು ಕೃಷಿಯತ್ತ ಕೇಂದ್ರೀಕರಿಸಬೇಕು. ಇವತ್ತು ಕೃಷಿಯಲ್ಲಿ ಸಾಧನೆ ಮಾಡಿರುವ ಅನೇಕ ಮಹನೀಯರನ್ನು ನೋಡಿದ್ದೇವೆ. ಅಕ್ಷರ ಜ್ಞಾನ ಪಡೆಯುವುದು ಬರಿ ನೌಕರಿ ಹೊಂದಲಷ್ಟೇ ಅಲ್ಲ. ಬದಲಾಗಿ, ಅನೇಕ ಕ್ಷೇತ್ರಗಳಲ್ಲಿ ಸಾಧನೆ ಮಾಡಲು ಇರುವ ಅಸ್ತ್ರ ಎಂಬ ಸತ್ಯವನ್ನು ಮೊದಲು ತಿಳಿದುಕೊಳ್ಳಬೇಕು. ಒಂದು ಕುಟುಂಬ ಕೇವಲ ಎರಡು ಎಕರೆ ಜಮೀನು ಹೊಂದಿದ್ದರೂ ಸಹ ಲಕ್ಷಾಂತರ ರೂ ಆದಾಯವನ್ನು ಪಡೆಯಬಹುದು. ದುಡಿಯುವ ಮನಸ್ಸು ನಮ್ಮದಾಗಿರಬೇಕು. ಅಂ-ದಾಗ ಮಾತ್ರ ಕೃಷಿಯಲ್ಲಿಯೂ ಪ್ರಗತಿ ಹೊಂದಲು ಸಾಧ್ಯವಾಗುತ್ತದೆ. ಸರಕಾರಿ ನೌಕರಿ ಪಡೆಯಲು ಪ್ರಯತ್ನಿಸಿ ಸಿಗದಿದ್ದಾಗ ಕೃಷಿ ಕಡೆಗೆ ಗಮನಹರಿಸಿ ಪ್ರಗತಿ ಸಾಧಿಸಿ ಎಂದರು.

ಪ್ರೊ. ಬಿ.ಎಫ್. ಚೆಗರೆಡ್ಡಿ, ಪ್ರಾಚಾರ್ಯ ಡಾ. ವಾಯ್. ಎನ್. ಪಾಪಣ್ಣವರ, ಎಸ್.ಆರ್. ಐಹೊಳಿ, ಎಸ್.ಎಸ್. ಗೋದಿ, ಜಿ.ಎ. ವೀರಾಪೂರ, ಎಚ್.ಆರ್. ದೊಡ್ಡಮನಿ, ಬಿ.ಎನ್. ನಾಯಕ, ಎಸ್.ಎಸ್. ಗೌಡರ ಸೇರಿದಂತೆ ಪ್ರಶಿಕ್ಷಣಾರ್ಥಿಗಳು ಉಪಸ್ಥಿತರಿದ್ದರು.

ಗ್ಯಾರಂಟಿ ಸಮಿತಿ ಅಧ್ಯಕ್ಷ ಸಂಗನಗೌಡ ಪಾಟೀಲ ಮಾತನಾಡಿ, ವಿದ್ಯಾರ್ಥಿಗಳು ಒಳ್ಳೆಯ ಗುಣಗಳನ್ನು ಹೊಂದುವ ಪ್ರಯತ್ನವನ್ನು ಮೊದಲು ಮಾಡಬೇಕು. ಕಾರಣ, ನೀವು ಶಿಕ್ಷಕರಾಗಬೇಕು ಎಂಬ ಇಚ್ಛೆಯಿಂದ ಬಿಇಡಿಗೆ ಬಂದಿದ್ದೀರಿ. ಹಿಗಾಗಿ, ನಿಮ್ಮಲ್ಲಿ ಒಳ್ಳೆಯ ಗುಣಗಳಿಗೆ ಸಾಕಷ್ಟು ಜಾಗೆ ಕಲ್ಪಿಸಿಕೊಡುವುದು ಅತಿ ಮುಖ್ಯ ಎನ್ನುವುದನ್ನು ವಿದ್ಯಾರ್ಥಿಗಳು ತಿಳಿದುಕೊಳ್ಳಬೇಕು. ಸಮಯಕ್ಕೆ ಮಹತ್ವ ಕೊಟ್ಟು ಹೆಚ್ಚಿನ ಜ್ಞಾನ ಸಂಪಾದಿಸಿ ಸಮಾಜದಲ್ಲಿ ಒಳ್ಳೆಯ ಸ್ಥಾನ ಪಡೆದುಕೊಳ್ಳಿ ಎಂದು ಸಲಹೆ ನೀಡಿದರು.

# ಸ್ಥಳೀಯ ಆಡಳಿತ ಜನರಿಗೆ ಹತ್ತಿರವಾಗಬೇಕು

▶▶ ಮೊದಲನೇ ಪುಟದಿಂದ

ಬಲವರ್ಧನೆಯಾಗಬೇಕು ಮತ್ತು ಆ ಮೂಲಕ ಸ್ಥಳೀಯ ಆಡಳಿತ ವ್ಯವಸ್ಥೆ ಜನರಿಗೆ ಹತ್ತಿರವಾಗಬೇಕು. ಸಂವಿಧಾನದಡಿ ಪ್ರತಿಯೊಬ್ಬರಿಗೂ ಇರುವ ಸಮಾನ ನ್ಯಾಯ, ಸ್ಥಾನಮಾನ, ಅವಕಾಶ, ಹಕ್ಕುಗಳನ್ನರಿತು ಗ್ರಾಮ ಸ್ವರಾಜ್ಯದ ಪರಿಕಲ್ಪನೆ ಸಾಕಾರಕ್ಕೆ ಕೈ ಜೋಡಿಬೇಕು. ಪಂಚಾಯತ್ ರಾಜ್ ವ್ಯವಸ್ಥೆಯ ಯೋಜನೆಗಳು ಸರ್ವಜನರ ಹಿತ ಮತ್ತು ಅವಶ್ಯಕತೆಗನುಗುಣವಾಗಿ ತಳಮಟ್ಟದಿಂದಲೇ ರೂಪಿತವಾಗಬೇಕು ಎಂಬ ಆಶಯದಿಂದ 2027-28ರ ಬಜೆಟ್‌ಗೆ ಪೂರ್ವಕವಾಗಿ ಜನಾಭಿಪ್ರಾಯ, ಚಿಂತನ-ಮಂಥನಕ್ಕೆ ಸರ್ಕಾರ ಅವಕಾಶ ಕಲ್ಪಿಸಿದೆ ಎಂದರು.

ಮಾಜಿ ಶಾಸಕರಾದ ಜಿ.ಎಸ್. ಗಡ್ಡದೇವರಮಠ, ರಾಮಣ್ಣ ಲಮಾಣಿ, ರಾಮಕೃಷ್ಣ ದೊಡ್ಡಮನಿ, ಸುಜಾತಾ ದೊಡ್ಡಮನಿ ಮಾತನಾಡಿದರು. ಜಿಲ್ಲಾ ಯೋಜನಾ ಅಧಿಕಾರಿ ಎ.ಎ. ಕಂಬಾಳಿಮಠ ಪ್ರಾಸ್ತಾವಿಕ ನುಡಿದರು. ಜಿ.ಪಂ ಮಾಜಿ ಅಧ್ಯಕ್ಷ ಎಸ್.ಪಿ. ಬಳಿಗಾರ ಗ್ರಾಮಗಳ ಸರ್ವಾಂಗೀಣ ಅಭಿವೃದ್ಧಿಗೆ ಒಂದಾಗೋಣ ಎಂಬ ಪ್ರತಿಜ್ಞಾವಿಧಿ ಬೋಧಿಸಿದರು. ತಾ.ಪಂ ಆಡಳಿತಾಧಿಕಾರಿ ಎಂ.ವಿ. ಚಳಗೇರಿ, ತಾ.ಪಂ ಇಓ ಧರ್ಮರ ಕೃಷ್ಣಪ್ಪ, ತಾಲೂಕಾ ಗ್ಯಾರಂಟಿ ಸಮಿತಿ ಅಧ್ಯಕ್ಷ ನಾಗರಾಜ ಮಡಿವಾಳರ, ಆನಂದಸ್ವಾಮಿ ಗಡ್ಡದೇವರಮಠ, ಚನ್ನಪ್ಪ ಜಗಲಿ, ವಿ.ಜಿ. ಪಡಗೇರಿ, ವೀರಯ್ಯ ಮಠಪತಿ, ಪ್ರವೀಣ ಬಾಳಿಕಾಯಿ, ರಾಮಣ್ಣ ಲಮಾಣಿ(ಶಿಗ್ಲಿ), ಜಯಕ್ಕ ಕಳ್ಳಿ, ಶಶಿಕಲಾ ಬಡಿಗೇರ, ಕಲ್ಲಪ್ಪ ಗಂಗಣ್ಣವರ, ಶಿವರಾಜಗೌಡ ಪಾಟೀಲ, ರಫೀಕ ಕಲಬುರ್ಗಿ, ಯಲ್ಲಪ್ಪ ತಳವಾರ, ಪರಮೇಶ ಲಮಾಣಿ, ಅಂಬರೀಶ ತೆಂಬದಮನಿ, ಫಕ್ಕೀರೇಶ ಮ್ಯಾಟಣ್ಣವರ, ಫಿರ್ದೋಸ್ ಆಡೂರ, ಯಲ್ಲವ್ವ ದುರಗಣ್ಣವರ, ಸಂತೋಷ ತಾಂದಳೆ, ರಾಜು ಓಲೇಕಾರ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಗ್ರಾ.ಪಂ ಅಧ್ಯಕ್ಷ-ಉಪಾಧ್ಯಕ್ಷ, ಸದಸ್ಯರು, ಸಾರ್ವಜನಿಕರು ಇದ್ದರು. ಈಶ್ವರ ಮೆಡ್ಲೇರಿ ನಿರೂಪಿಸಿದರು.

**ಫೆ. 1ರಂದು ಗದಗ ಮೇರಿ ದೇವಾಸಿಯಾ ಗೃಹ ನಿರ್ಮಾಣ ಸಹಕಾರಿ ಸಂಘದ ಉದ್ಘಾಟನಾ ಸಮಾರಂಭದ ನಿಮಿತ್ತ ಲೇಖನ**

# ನೌಕರರ ಸಂಘಟನೆಯ ದಾರಿದೀಪ ದೇವಾಸಿಯಾ

ಮೇರಿ ದೇವಸಿಯಾ ಎಂದಾಕ್ಷಣ ನಮಗೆಲ್ಲಾ ನೆನಪಾಗುವದು ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘಟನೆ. 105 ವರ್ಷಗಳ ಇತಿಹಾಸ ಹೊಂದಿರುವ ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದ ಮೊದಲ ಮಹಿಳಾ ಅಧ್ಯಕ್ಷರಾಗಿ 1963ರಿಂದ 1967ವರೆಗೆ ಅಧಿಕಾರ ವಹಿಸಿಕೊಂಡು ಮಂಡ್ಯ ಜಿಲ್ಲೆ ಸೇರಿದಂತೆ ರಾಜ್ಯ ಪ್ರವಾಸವನ್ನು ಸೈಕಲ್‌ನಲ್ಲಿ ಕೈಗೊಳ್ಳುವ ಮೂಲಕ ಸಂಘಟನೆಗೆ ಒಂದು ಶಕ್ತಿ ತಂದು ಕೊಟ್ಟರು. 8 ದಶಕಗಳ ಹಿಂದೆ ಅಂದರೆ 1950ರಲ್ಲಿ ರಾಜ್ಯ ಸರಕಾದ ಸಚಿವಾಲಯದಲ್ಲಿ ಸರಕಾರಿ ಸೇವೆಯನ್ನು ಪ್ರಾರಂಭಿಸಿದ ದಿನಗಳಿಂದಲೇ ನೌಕರರ ಸಂಘಟನೆಗಾಗಿ ದುಡಿದರು. ಸಂಘ ಮತ್ತು ನೌಕರರಿಗಾಗಿ ಮಾಡಿದ ಕಾರ್ಯ ಮತ್ತು ತ್ಯಾಗ ಬದುಕು ಚಿರಸ್ಮರಣೀಯವಾಗಿ ಸಂಘಟನೆಯ ಚರಿತ್ರೆಯಲ್ಲಿ ಗೋಚರವಾಗುತ್ತದೆ.

ಸರಕಾರಿ ಸೇವೆ ಮಾಡಿದ ಅವಧಿ ಕೇವಲ 15 ವರ್ಷಗಳಾದರೂ, ಮಾಡಿದ ಸಾಧನೆ ಅಪಾರ. ಮೇರಿ ದೇವಾಸಿಯಾ ಅವರ ದೂರದೃಷ್ಟಿಯ ಚಿಂತನೆ, ಸಮರ್ಪಣಾ ಭಾವ, ಕಾರ್ಯವೈಖರಿ, ಸಂಘಟನಾ ಕುಶಲತೆ, ಧೀಮಂತ ನಾಯಕತ್ವ, ನಿರಂತರ ಹೋರಾಟದಿಂದ ಸಂಘದ ಬೆಳವಣಿಗೆಗೆ ಭದ್ರ ಬುನಾದಿ ಹಾಕಿದರು.

ಸರಕಾರ ನೌಕರರ ಬಗ್ಗೆ ತೀರಾ



ನಿರ್ಲಕ್ಷ್ಯದ ಆ ಸಮಯದಲ್ಲಿ ನೌಕರರ ಬದುಕು ದುಃಸ್ಥಿತಿಗೆ ಬಂದಾಗ ಕೈಕಟ್ಟಿ ಕುಳಿತುಕೊಳ್ಳದೆ ಸಂಘಟನೆಗೆ ಸಾಂಘಿಕ ಹೋರಾಟದ ಶಕ್ತಿಯನ್ನು ತುಂಬಿ ಹಗಲಿರಳು ಶ್ರಮವಹಿಸಿ ಹೋರಾಟಕ್ಕೆ ಹೊಸರೂಪ ಕೊಟ್ಟು, ಯಶಸ್ವಿಯ ಗುಟ್ಟನ್ನು ತೋರಿಸಿಕೊಟ್ಟು, ಸಂಘದ ಗೆಲವಿಗೆ ಕಾರಣರಾಗಿದ್ದಲ್ಲದೆ ನೌಕರರ ಕಷ್ಟದ ದಿನಗಳಿಗೆ ಅಂತ್ಯ ಹಾಡಿದ ಕೀರ್ತಿಗೆ ಪಾತ್ರರಾದರು.

ಮೇರಿ ದೇವಾಸಿಯಾ ನಿಸ್ವಾರ್ಥ ಸೇವೆ, ಸರಳ ಜೀವನಶೈಲಿಯ ವ್ಯಕ್ತಿತ್ವ, ಆದರ್ಶ ವಿಚಾರಧಾರೆ, ಸಮರ್ಪಣಾ ಬದುಕು ಇಂದಿನ ನೌಕರರ ಸಂಘಟನೆಯ



ಪದಾಧಿಕಾರಿಗಳಿಗೆ ದಾರಿದೀಪ. ನಾಡಿನ ಸಮಸ್ತ ಸರಕಾರಿ ನೌಕರ ಬಾಂಧವರು ಮತ್ತು ಸರಕಾರ ಸ್ಮರಿಸಬೇಕಾಗಿರುವದು ಆದ್ಯ ಕರ್ತವ್ಯ. ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘ ಜಿಲ್ಲಾ ಶಾಖೆ ಗದಗ ಇದರ ನಿಕಟಪೂರ್ವ ಅಧ್ಯಕ್ಷರಾದ ಡಾ. ರವಿ ಗುಂಜೀಕರ ಅವರ ನೇತೃತ್ವದಲ್ಲಿ ನೌಕರರ ಕಣ್ಮಣಿ, ದಿಟ್ಟ ಹೋರಾಟಗಾರ್ತಿ ದೇವಾಸಿಯಾ ಹೆಸರಿನಲ್ಲಿ ಗಂಡು ಮೆಟ್ಟಿನ ನಾಡು, ಸಂಗೀತದ ಸಾಹಿತ್ಯ ಕಲೆಯ ತವರೂರು, ಮಣ್ಣು-ಗಾಳಿ-ನೀರಿನಲ್ಲಿ ಅಗಾಧ ಶಕ್ತಿ ಹೊಂದಿರುವ ಮುದ್ರಣಕಾಶಿ ಗದಗ ನಗರದಲ್ಲಿ ಮೇರಿ ದೇವಾಸಿಯಾ ಗೃಹ ನಿರ್ಮಾಣ ಸಹಕಾರಿ ಸಂಘವನ್ನು ರಾಜ್ಯದಲ್ಲಿಯೇ ಮೊದಲ ಬಾರಿಗೆ ಅಸ್ತಿತ್ವಕ್ಕೆ ತಂದಿರುವದು ಹೆಮ್ಮೆಯ ವಿಷಯ.

ಇಂದು ಗದಗ ನಗರದ ಪಂಡಿತ ಭೀಮಸೇನ ಜೋಶಿ ರಂಗ ಮಂದಿರದಲ್ಲಿ ಸಂಘವು ಉದ್ಘಾಟನೆಗೊಂಡು ಚಲನಶೀಲವಾಗಿ ಇಂದಿನಿಂದಲೇ ಕಾರ್ಯಾರಂಭ ಮಾಡಲಿದೆ.

ಸ್ನೇಹಜೀವಿ, ಸಂಘಟನಾ ಚತುರ, ಸಮರ್ಥ ಆಡಳಿತಗಾರ, ಅಭಿವೃದ್ಧಿಯ ಕನಸುಗಾರ, ವೃತ್ತಿ ಮತ್ತು ಸಂಘಟನೆಯಲ್ಲಿ ಸಮನ್ವಯತೆ ಗುಣ ಮೈಗೂಡಿಸಿಕೊಂಡ, ಹೋರಾಟದ ನೆಲೆಗಟ್ಟಿನ ಪರಿಸದಲ್ಲಿ ತಮ್ಮ ವ್ಯಕ್ತಿತ್ವ ರೂಪಿಸಿಕೊಂಡು ಸೇವಾ ನಿವೃತ್ತಿ ಹೊಂದಿದ್ದರೂ ನೌಕರರ ಸೇವೆ ಮಾಡುವ ಇಂಗಿತವನ್ನು ಬದುಕಿನಲ್ಲಿ ಅಳವಡಿಸಿಕೊಂಡಿರುವ ಡಾ. ರವಿ ಎಲ್.ಗುಂಜೀಕರ ಅವರು ಮೇರಿ ದೇವಾಸಿಯಾ ಹೆಸರಿನಲ್ಲಿ ಮೇರಿ ದೇವಾಸಿಯಾ ಗೃಹ ನಿರ್ಮಾಣ ಸಹಕಾರಿ ಸಂಘದ ಮೂಲಕ ಜಿಲ್ಲೆಯ ನಿವೇಶನ ರಹಿತ ನೌಕರರಿಗೆ ಕಡಿಮೆ ದರದಲ್ಲಿ ಸುಸಜ್ಜಿತ, ಸಕಲ ಸೌಕರ್ಯ ಹೊಂದಿರುವ ಬಡಾವಣೆಯಲ್ಲಿ ನಿವೇಶನ ಮತ್ತು ಅವರ ಕನಸಿನ ಸೂರು ನನಸಾಗಿಸಲು ಮುಂದಾಗಿರುವುದು ನೌಕರರ ಬಗೆಗಿನ ಅವರ ಕಾಳಜಿಯನ್ನು ಎತ್ತಿ ತೋರಿಸುತ್ತದೆ.

1998ರಲ್ಲಿ ಗದಗ ಜಿಲ್ಲೆಯ ಸರಕಾರಿ ನೌಕರ ಸಂಘದ ನಿರ್ದೇಶಕರಾಗಿ ಆಯ್ಕೆಯಾಗುವ ಮೂಲಕ ಸಂಘಟನೆಗೆ ಪಾದಾರ್ಪಣೆ ಮಾಡಿದ ಗುಂಜೀಕರರು, 2003ರಲ್ಲಿ ಜಿಲ್ಲಾ ಸಂಘಟನಾ ಕಾರ್ಯದರ್ಶಿಯಾಗಿ, 2008ರಲ್ಲಿ ಪ್ರಧಾನ ಕಾರ್ಯದರ್ಶಿಯಾಗಿ, 2013, 2018 ಮತ್ತು 2024 ಮೂರು ಅವಧಿಗೆ ಅವಿರೋಧವಾಗಿ ಗದಗ ಜಿಲ್ಲಾ ಶಾಖೆಯ ಅಧ್ಯಕ್ಷರಾಗಿ ಆಯ್ಕೆಗೊಂಡು ಸಂಘದ ಇತಿಹಾಸದಲ್ಲಿ ಧ್ರುವತಾರೆಯಾಗಿ ಬೆಳಗಿದರು. ಇವರ ಕ್ರಿಯಾಶೀಲ ವ್ಯಕ್ತಿತ್ವ ಅವಲೋಕಿಸಿದ ರಾಜ್ಯ ಸಂಘದ ಅಧ್ಯಕ್ಷರಾದ ಷಡಾಕ್ಷರಿಯವರು 2019ರಲ್ಲಿ ಕೇಂದ್ರ ಸಂಘದ ಉಪಾಧ್ಯಕರನ್ನಾಗಿ, 2024ರಲ್ಲಿ ಹಿರಿಯ ಉಪಾಧ್ಯಕ್ಷರನ್ನಾಗಿ ನೇಮಕ ಮಾಡಿದರು.

ಹೊಣೆಗಾರಿಕೆ, ಜವಾಬ್ದಾರಿ ನಿರ್ವಹಣೆಯ ಮೂಲಕ ಅವರ ಆಪ್ತ ಸಹವರ್ತಿಯಾದರು.

ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿಸ್ತರಣಾಧಿಕಾರಿಗಳ ಕ್ಷೇಮಾಭಿವೃದ್ಧಿ ಸಂಘದ ರಾಜ್ಯದ ಘಟಕದ ಅಧ್ಯಕ್ಷರಾಗಿಯೂ ಪ್ರಾಮಾಣಿಕ ಸೇವೆ ಸಲ್ಲಿಸಿದ್ದಾರೆ.

**– ವಿಶ್ವನಾಥ ಯ. ಕಮ್ಮಾರ.**
ನಿರ್ದೇಶಕರು, ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘ ಜಿಲ್ಲಾ ಶಾಖೆ ಗದಗ.

**ಫೆ. 1ರಂದು ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದ ರಾಜ್ಯ ಕಾರ್ಯಕಾರಿ ಸಮಿತಿ ಸಭೆಯ ನಿಮಿತ್ತ ಲೇಖನ**

# ಸಮಿತಿ ಸಭೆ ಚರಿತ್ರೆ ಸೃಷ್ಟಿಸಲಿ

ಕರ್ನಾಟಕ ರಾಜ್ಯ ಸರಕಾರಿ ಸಂಘವು ಶತಮಾನ ಪೂರೈಸಿದ ಅತಿದೊಡ್ಡ ಸಂಘಟನೆಯಾಗಿದೆ. ರಾಜ್ಯ ಸರಕಾರಿ ನೌಕರರ ವಿವಿಧ ನೂರಾರು ವೃಂದ ಸಂಘಟನೆಗಳಿಗೆ ಮಾತೃಸ್ಥಾನದಲ್ಲಿದ್ದು, ಪೋಷಿಸಿ ಬೆಳೆಸಿದೆ. 105 ವರ್ಷಗಳ ಇತಿಹಾಸದಲ್ಲಿ ಸಂಘವು ಕೆಲವು ಐತಿಹಾಸಿಕ ನಿರ್ಣಯಗಳ ಮೂಲಕ ನೌಕರರ ಹಿತರಕ್ಷಣೆ ಕಾಪಾಡಿರುವದನ್ನು ಕಾಣುತ್ತೇವೆ. ನೌಕರ ಮತ್ತು ನೌಕರ ಕುಟುಂಬದವರ ಆರ್ಥಿಕ, ಸಾಮಾಜಿಕ, ಸೇವಾಭದ್ರತೆ, ಕಾಲ ಕಾಲಕ್ಕೆ ವೇತನ ಪರಿಷ್ಕರಣೆ, ತುಟ್ಟಿಭತ್ಯೆ, ಮನೆ ಬಾಡಿಗೆ, ವೈದ್ಯಕೀಯ ಭತ್ಯೆ ಸೌಲಭ್ಯಗಳನ್ನು ಸಾಂಘಿಕ ಹೋರಾಟದಿಂದ ಕೊಡಿಸುವ ಮೂಲಕ ನೌಕರರ ಬದುಕನ್ನು ಹಸನಾಗಿಸಿದೆ.

ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘಕ್ಕೆ ಸಿ.ಎಸ್. ಷಡಾಕ್ಷರಿ ಅವರು ರಾಜ್ಯಾಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡು 24*7 ಕಾರ್ಯನಿರ್ವಹಿಸುವ ಮೂಲಕ ಸಂಘಕ್ಕೆ ಒಂದು ಹೊಸ ಆಯಾಮ ತಂದು ಕೊಟ್ಟರು.

ಸೀಮಿತ ಕ್ಷೇತ್ರಕ್ಕೆ ತನ್ನ ಕಾರ್ಯವ್ಯಾಪ್ತಿಯೊಂದಿಗೆ ಅಪರಿಚಿತವಾಗಿದ್ದ ಸಂಘಟನೆಯನ್ನು ರಾಜ್ಯದ ಮೂಲೆ ಮೂಲೆಗಳಿಗೆ ಪ್ರವಾಸ ಕೈಗೊಂಡು ಎಲ್ಲ ಸ್ಥರದ ನೌಕರರನ್ನು ಭೇಟಿ ಮಾಡಿ ಜಿಲ್ಲಾ ಮಟ್ಟದಲ್ಲಿ ನೌಕರರ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಹಬ್ಬ, ನೌಕರರ ಮಕ್ಕಳಿಗೆ ಪ್ರತಿಭಾ ಪುರಸ್ಕಾರದಂತಹ ವಿನೂತನ ಕಾರ್ಯಕ್ರಮಗಳ ಮುಖೇನ ರಾಜ್ಯದ ಉದ್ದಗಲಕ್ಕೂ ಸಂಘದ ವ್ಯಾಪ್ತಿಯನ್ನು



ವಿಸ್ತರಿಸಿದರು.

ಜಿಲ್ಲಾ, ತಾಲೂಕು, ಹೋಬಳಿ ಹಂತದಲ್ಲಿ ಜರುಗುತ್ತಿರುವ ಸಂಘದ ಕಾರ್ಯಕ್ರಮಕ್ಕೆ ತಮ್ಮ ಒತ್ತಡದ ಕಾರ್ಯಗಳ ನಡುವೆಯೂ ಆಗಮಿಸಿ ಸಂಘಟನೆಗೊಂದು ಬಲವಾದ ಶಕ್ತಿಯನ್ನು ತರುವ ಮೂಲಕ ಅಪರೂಪದ ಅಧ್ಯಕ್ಷರಾಗಿ ರಾಜ್ಯದ ಲಕ್ಷಾಂತರ ನೌಕರರ ಮನದಾಳದಲ್ಲಿ ಜನಮಾನಸರಾಗಿ ನಮ್ಮೆಲ್ಲರ ಅಭಿಮಾನದ ಹೆಮ್ಮೆಯ ಅಧ್ಯಕ್ಷರಾಗಿದ್ದಾರೆ ಷಡಾಕ್ಷರಿಯವರು. ಸದಾ ಪಾದರಸದಂತೆ ಕೆಲಸದಲ್ಲಿ ತಮ್ಮನ್ನು ತಾವು ಸಮರ್ಪಿಸಿಕೊಂಡು ವೈಯುಕ್ತವಾದ ಹಸನಾದ ಬದುಕಿನ ಮೂಲಕ ನಮಗೆಲ್ಲಾ ರೋಲ್ ಮಾಡೆಲ್ ಆಗಿದ್ದಾರೆ. ಒಬ್ಬ ದಕ್ಷ ಮತ್ತು ಸಮರ್ಥ ನಾಯಕತ್ವದಲ್ಲಿ ಸಂಘ ಮುನ್ನಡೆದರೆ ಏನೆಲ್ಲಾ ಸಾಧನೆ ಮಾಡಬಹುದು ಎಂಬುದನ್ನು ತೋರಿಸಿಕೊಟ್ಟಿದ್ದಾರೆ.

* ಶೇಕಡಾ 27.50ರಷ್ಟು ಫಿಟ್‌ಮಂಟ್‌ನೊಂದಿಗೆ 7ನೇ ವೇತನ ಆಯೋಗದ ವರದಿಯನ್ನು ಯಥಾವತ್ತಾಗಿ ಜಾರಿಗೊಳಿಸಿರುವದು.
* ಸರಕಾರಿ ನೌಕರರ ಮೇಲೆ ಅನಾಮಧೇಯ ದೂರುಗಳು ಬಂದಲ್ಲಿ ತನಿಖೆ ಅಗತ್ಯವಿಲ್ಲವೆಂಬ ಸರಕಾರದ ಆದೇಶ.
* ರಾಜ್ಯ ಸರಕಾರಿ ನೌಕರರ ಹಬ್ಬದ ಮುಂಗಡ(ಎಫ್‌ಎ) ಮೊತ್ತವನ್ನು 10 ಸಾವಿರದಿಂದ 25 ಸಾವಿರ ರೂಗಳಿಗೆ ಹೆಚ್ಚಳ.
* ಮಹಿಳಾ ಸರಕಾರಿ ನೌಕರರಿಗೆ ಮಕ್ಕಳ ಆರೈಕೆಗಾಗಿ 6 ತಿಂಗಳ ಶಿಶುಪಾಲನಾ ರಜೆಯ ಆದೇಶ.
* ರಾಜ್ಯದ ಮಹಿಳಾ ಸರಕಾರಿ ನೌಕರರಿಗೆ ಋತುಚಕ್ರ ರಜೆ ಮಂಜೂರು.
* ಪ್ರತಿವರ್ಷ ಏಪ್ರೀಲ್ 21ರಂದು ರಾಜ್ಯ ಸರಕಾರಿ ನೌಕರರ ದಿನಾಚರಣೆ ಆದೇಶ.
* ಸರಕಾರಿ ನೌಕರರು ಹಾಗೂ ಕುಟುಂಬದ ಅವಲಂಬಿತ ಸದಸ್ಯರಿಗೆ ಸಂಪೂರ್ಣ ನಗದುರಹಿತ ಚಿಕಿತ್ಸೆ ನೀಡುವ ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆ (ಕೆಎಎಸ್‌ಎಸ್) ಜಾರಿ.
* ಸರಕಾರಿ ನೌಕರರಿಗೆ ಡಯಾಲಿಸಿಸ್ ಚಿಕಿತ್ಸೆಗಾಗಿ 6 ತಿಂಗಳ ವಿಶೇಷ ಸಾಂದರ್ಭಿಕ ರಜೆ ಆದೇಶ.
* ಸರಕಾರಿ ನೌಕರರು ಸ್ಥಿರಾಸ್ತಿ ಮತ್ತು ಚರಾಸ್ಥಿಯನ್ನು ಸರಕಾರದ ಅನುಮತಿ ಇಲ್ಲದೆ ಖರೀದಿಸಲು ಆದೇಶ.
* ಸ್ಯಾಲರಿ ಪ್ಯಾಕೇಜ್ ಯೋಜನೆಯಡಿಯಲ್ಲಿ ಅಪಘಾತದಲ್ಲಿ ಮರಣ ಹೊಂದಿದ ನೌಕರರ ಕುಟುಂಬಕ್ಕೆ 1 ಕೋಟಿ ರೂ ವಿಮಾ ಯೋಜನೆ ಜಾರಿ.
* ಕಳೆದ 5 ವರ್ಷಗಳಿಂದ ರಾಜ್ಯ ಮಟ್ಟದ ನೌಕರರ ಕ್ರೀಡಾಕೂಟಗಳ ಯಶಸ್ವಿ ಆಯೋಜನೆ.
* ಸರಕಾರಿ ನೌಕರರ ಕುಂದು-ಕೊರತೆಗಳನ್ನು ಆಲಿಸಲು ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಜೆಸಿಎಮ್ ಸಮಿತಿ ರಚನೆ ಆದೇಶ.

ಹೀಗೆ ನೂರಾರು ಸೌಲಭ್ಯಗಳನ್ನು ನೌಕರ ಬಾಂಧವರಿಗೆ ಕೊಡಿಸುವ ಮೂಲಕ ನೌಕರರು ಇಂದು ಸಂತಸ, ನೆಮ್ಮದಿಯಿಂದ ಜೀವನ ಸಾಗಿಸಲು ಕಾರಣರಾಗಿದ್ದಾರೆ. ಗದಗ ಜಿಲ್ಲೆಯಾಗಿ 29 ವರ್ಷಗಳ ತರುವಾಯ ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದ ರಾಜ್ಯ ಕಾರ್ಯಕಾರಿ ಸಮಿತಿ ಸಭೆ ನಡೆಸಲು ಪ್ರಥಮ ಬಾರಿಗೆ ಅವಕಾಶ ಮಾಡಿಕೊಡುವ ಮೂಲಕ ಪ್ರಾದೇಶಿಕ ಸಮಾನತೆಗೆ ಆದ್ಯತೆ ನೀಡಿರುವದನ್ನು ಕಾಣಬಹುದಾಗಿದೆ. ಗಂಡು ಮೆಟ್ಟಿನ ನಮ್ಮ ಮಾತೃನೆಲದಲಿ ಜರುಗುವ ರಾಜ್ಯ ಕಾರ್ಯಕಾರಿ ಸಭೆಯಲ್ಲಿ ಓಪಿಎಸ್ ಜಾರಿಯಂತಹ ಐತಿಹಾಸಿಕ ತಿರ್ಮಾನಗಳ ಮೂಲಕ ಚರಿತ್ರೆಯ ಪುಟ ಸೇರಲೆಂದು ಸಮಸ್ತ ನೌಕರ ಬಾಂಧವರ ಆಶಯವಾಗಿದೆ.

**– ವಿಶ್ವನಾಥ ಯ.ಕಮ್ಮಾರ.**
ನಿರ್ದೇಶಕರು, ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘ, ಗದಗ ಜಿಲ್ಲಾ ಶಾಖೆ.

# ಗದುಗಿನ ವೆಲ್‌ನೋನ್ ಸ್ಟೇಂಜರ್ಸ್ ನೃತ್ಯ ತಂಡಕ್ಕೆ ಬಹುಮಾನ



**■ ವಿಜಯಸಾಕ್ಷಿ ಸುದ್ದಿ, ಗದಗ**

ಧಾರವಾಡ ಜಿಲ್ಲೆಯ ನವಲೂರು ಗ್ರಾಮದ ಶ್ರೀ ಬನಶಂಕರಿ ದೇವಿಯ ಜಾತ್ರಾ ಮಹೋತ್ಸವದ ಅಂಗವಾಗಿ ಬನಶಂಕರಿ ಡೆವಲಪರ್ಸ್ ಹಾಗೂ ಹೆರಿಟೇಜ್ ಡೆವಲಪರ್ಸ್ ಇವರ ಸಹಯೋಗದಲ್ಲಿ 16ನೇ ಬಾರಿ ಆಯೋಜಿಸಲಾದ ಮುಕ್ತ ನೃತ್ಯ ಸ್ಪರ್ಧೆ "ಡ್ಯಾನ್ಸ್ ಧಮಾಕ-2026"ರಲ್ಲಿ ಗದುಗಿನ ಶ್ರದ್ಧಾ ಸ್ವರ ಸಂಗೀತ ವೆಲ್ಫೇರ್ ಟ್ರಸ್ಟ್‌ನ "ವೆಲ್ ನೋನ್ ಸ್ಟೇಂಜರ್ಸ್" ನೃತ್ಯ ತಂಡವು ದ್ವಿತೀಯ ಬಹುಮಾನವನ್ನು ಪಡೆದು ಸಾಧನೆ ಮಾಡಿದೆ.

ಶಿವಾಜಿ ಘಾಟ್ಗೆ, ಜಗನ್ನಾಥ್ ಬಿದರಿಗೌಡರ, ಸಚಿನ ಗುರುನಾಣಿ, ಬಸವರಾಜ ಪಡೇಸೂರ ಸೇರಿದಂತೆ ಮುಂತಾದವರು ಇದ್ದರು.

ವಿವಿಧ ರಾಜ್ಯಗಳಿಂದ ಆಗಮಿಸಿದ ಅನೇಕ ನೃತ್ಯ ತಂಡಗಳು ಭಾಗವಹಿಸಿದ್ದ ಈ ತೀವ್ರ ಸ್ಪರ್ಧೆಯಲ್ಲಿ ಶ್ರದ್ಧಾ ಸ್ವರ ಸಂಗೀತ ವೆಲ್ಫೇರ್ ಟ್ರಸ್ಟ್‌ನ ನೃತ್ಯ ತಂಡವು ತನ್ನ ಶಿಸ್ತುಬದ್ಧ ಪ್ರದರ್ಶನ, ಉನ್ನತ ಕಲಾತ್ಮಕತೆ ಹಾಗೂ ನವೀನ ನೃತ್ಯ ಸಂಯೋಜನೆಯ ಮೂಲಕ ತೀರ್ಪುಗಾರರ ವಿಶೇಷ ಮೆಚ್ಚುಗೆಗೆ ಪಾತ್ರವಾಯಿತು.

ನೃತ್ಯ ನಿರ್ದೇಶಕರಾದ ಸಂತೋಷ ಅಸುಂಡಿ ಅವರ ನೇತೃತ್ವದಲ್ಲಿ ನಡೆದ ಈ ಸ್ಪರ್ಧೆಯಲ್ಲಿ ಸಂತೋಷ ಅಸುಂಡಿ, ಚಿರಂಜೀವಿ ಜಿಂದೇ, ವಿಕಾಸ್ ಶೆಟ್ಟಿ, ಶಬ್ದ ಕಲಾಲ್ ಹಾಗೂ ಪ್ರಕುಲ್ ಲಕ್ಕುಂಡಿ ಅವರು ನೃತ್ಯ ಪ್ರದರ್ಶನ ನೀಡಿದರು.

ನೃತ್ಯ ತಂಡದ ಸದಸ್ಯರ ನಿರಂತರ ಪರಿಶ್ರಮ, ಶಿಸ್ತುಬದ್ಧ ಅಭ್ಯಾಸ ಹಾಗೂ ತರಬೇತುದಾರರ ಸಮರ್ಪಿತ ಮಾರ್ಗದರ್ಶನವೇ ಈ ಮಹತ್ವದ ಸಾಧನೆಗೆ ಪ್ರಮುಖ ಕಾರಣವಾಗಿದೆ.

ಈ ಸಾಧನೆಗೆ ಸಂತಸ ವ್ಯಕ್ತಪಡಿಸಿದ ಟ್ರಸ್ಟ್‌ನ ಅಧ್ಯಕ್ಷರಾದ ಉಜ್ವಲ್ ಡಿ. ಕಬಾಡಿ ಅವರು, ಸಂಸ್ಥೆಯ ಎಲ್ಲಾ ಸಿಬ್ಬಂದಿ, ಮಕ್ಕಳು ಹಾಗೂ ಪಾಲಕರೊಂದಿಗೆ ಸೇರಿ ನೃತ್ಯ ತಂಡದ ಎಲ್ಲಾ ಕಲಾವಿದರಿಗೆ ಹಾರ್ದಿಕ ಅಭಿನಂದನೆಗಳನ್ನು ಸಲ್ಲಿಸಿ, ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚಿನ ರಾಷ್ಟ್ರ ಮಟ್ಟದ ಹಾಗೂ ಅಂತಾರಾಷ್ಟ್ರೀಯ ಸಾಧನೆಗಳನ್ನು ಮಾಡುವ ವಿಶ್ವಾಸವನ್ನು ವ್ಯಕ್ತಪಡಿಸಿದರು.

# ಬೀದರ್ : ಮೊಳಕೇರಾ ಗ್ರಾಮದಲ್ಲಿ ಸ್ಫೋಟ ಪ್ರಕರಣ ; ಸಮಗ್ರ ತನಿಖೆಗೆ ಸಚಿವ ಈಶ್ವರ್ ಖಂಡ್ರೆ ಆದೇಶ

**■ ವಿಜಯಸಾಕ್ಷಿ ಸುದ್ದಿ, ಬೀದರ್**

ಬೀದರ್ ಜಿಲ್ಲೆ ಹುಮನಾಬಾದ್ ತಾಲೂಕಿನ ಮೊಳಕೇರಾ ಗ್ರಾಮದ ಮೋಳಗಿ ಮಾರಯ್ಯ ದೇವಸ್ಥಾನ ರಸ್ತೆಯಲ್ಲಿ ಅನುಮಾನಾಸ್ಪದ ವಸ್ತು ಸ್ಫೋಟಗೊಂಡು, ಶಾಲೆಗೆ ತೆರಳುತ್ತಿದ್ದ ಮಕ್ಕಳೂ ಸೇರಿ 6 ಜನರು ಗಾಯಗೊಂಡಿರುವ ಘಟನೆ ಬಗ್ಗೆ ಆಘಾತ ವ್ಯಕ್ತಪಡಿಸಿರುವ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ್ ಖಂಡ್ರೆ ತನಿಖೆಗೆ ಆದೇಶಿಸಿದ್ದಾರೆ.

ಗಾಯಾಳುಗಳಿಗೆ ತಕ್ಷಣ ಸೂಕ್ತ ಚಿಕಿತ್ಸೆ ನೀಡುವಂತೆ ಹಾಗೂ ಚಿಕಿತ್ಸಾ ವೆಚ್ಚವನ್ನು ಜಿಲ್ಲಾಡಳಿತವೇ ಭರಿಸುವಂತೆ ಸೂಚನೆ ನೀಡಿದ್ದೇನೆ. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಹಾಗೂ ಸ್ಫೋಟಕ ತಜ್ಞರನ್ನು ಸ್ಥಳಕ್ಕೆ ಕಳುಹಿಸಿ, ಸ್ಫೋಟ ಸ್ಥಳದಲ್ಲಿ ಮಾದರಿಗಳನ್ನು ಸಂಗ್ರಹಿಸಿ ಸಮಗ್ರ ತನಿಖೆ ನಡೆಸಲು ಆದೇಶಿಸಿದ್ದೇನೆ ಎಂದು ಈಶ್ವರ್ ಖಂಡ್ರೆ ಸಾಮಾಜಿಕ ಜಾಲತಾಣ ಖಾತೆಗಳಲ್ಲಿ ತಿಳಿಸಿದ್ದಾರೆ.

ಸ್ಫೋಟಕ್ಕೆ ಕಾರಣವೇನು?



ಬಳಸಿದ ವಸ್ತು ಯಾವುದು? ಅದು ಅಲ್ಲಿ ಹೇಗೆ ಬಂದಿತು? ಯಾವ ಉದ್ದೇಶಕ್ಕಾಗಿ ಬಳಸಲಾಗುತ್ತಿತ್ತು? ಎಂಬ ಎಲ್ಲ ವಿಷಯಗಳ ಬಗ್ಗೆ ಸಂಪೂರ್ಣ ತನಿಖೆ ನಡೆಸಿ, ಕಾರಣರಾದವರ ವಿರುದ್ಧ ಕಾನೂನುಬದ್ಧವಾಗಿ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಈಶ್ವರ್ ಖಂಡ್ರೆ ಹೇಳಿದ್ದಾರೆ.

ಮೊಳಕೇರಾ ಗ್ರಾಮದಲ್ಲಿ ಶನಿವಾರ ಮುಂಜಾನೆ ಅನುಮಾನಾಸ್ಪದ ವಸ್ತು ಸ್ಪೋಟಗೊಂಡು 6 ಜನರು ಗಾಯಗೊಂಡಿದ್ದಾರೆ ಎಂದು ವರದಿಯಾಗಿದೆ. ಗಾಯಾಳುಗಳನ್ನು ಗ್ರಾಮದ ಜಬ್ಬಾರ ಸಾಬ್ (70), ಅನ್ವರ್ (18), ಅರ್ಜಾನ್ (8), ಆರೀಶ್ (6), ಮಸ್ತಾನ್ (8) ಮತ್ತು ಬುಶೇರಾ (3) ಎಂದು ಗುರುತಿಸಲಾಗಿದೆ.

ಸ್ಫೋಟ ಸಂಭವಿಸಿದಾಗ ವಿದ್ಯಾರ್ಥಿಗಳಯ ಶಾಲೆಗೆ ತೆರಳುತ್ತಿದ್ದರು. ಗಾಯಾಳುಗಳನ್ನು ಚಿಕಿತ್ಸೆಗಾಗಿ ಜಿಲ್ಲಾಸ್ಪತ್ರೆಗೆ ದಾಖಲಿಸಲಾಗಿದ್ದು, ಒಬ್ಬ ವಿದ್ಯಾರ್ಥಿಯ ಸ್ಥಿತಿ ಚಿಂತಾಜನಕವಾಗಿದೆ ಎಂದು ವರದಿಗಳು ಹೇಳಿವೆ.

# ಲ್ಯಾಂಡ್ ಲಾರ್ಡ್: ಕೇವಲ ಸಿನಿಮಾ ಅಲ್ಲ, ನಮ್ಮ ಬದುಕಿನ ಕಟು ಸತ್ಯಗಳ ಪ್ರತಿಬಿಂಬ!

'ಕಾಟೇರ' ಚಿತ್ರದ ನಂತರ ನಾನು ಯಾವುದೇ ಚಲನಚಿತ್ರವನ್ನು ನೋಡಿರಲಿಲ್ಲ. ಆದರೆ ಸಮಯಾವಕಾಶ ಸಿಕ್ಕ ಹಿನ್ನೆಲೆಯಲ್ಲಿ, ಅನೇಕ ಪ್ರಗತಿಪರ ಚಿಂತಕರು ಉತ್ತಮ ಅಭಿಪ್ರಾಯ ವ್ಯಕ್ತಪಡಿಸಿದ್ದ ದುನಿಯಾ ವಿಜಯ್ ಅವರ 'ಲ್ಯಾಂಡ್ ಲಾರ್ಡ್' ಚಿತ್ರವನ್ನು ನೋಡಲು ನಿರ್ಧರಿಸಿದೆ.

ಚಿತ್ರ ಆರಂಭವಾದ ಕೆಲವೇ ಕ್ಷಣಗಳಲ್ಲಿ, ನನಗೆ ಪರಿಚಿತವಾಗಿದ್ದ ಒಂದು ಘಟನೆ ಕಣ್ಣಮುಂದೆ ಜೀವಂತವಾಗಿ ನಿಂತಿತು. ಭೂರಹಿತ ದಲಿತನೊಬ್ಬ ಸಾವುಕಾರನ ಹೊಲದಲ್ಲಿ ಹಸಿವಿನಿಂದ ಕಡಲೆ ಗಿಡ ಕಿತ್ತು ತಿಂದಿದ್ದು ತಪ್ಪು ಎಂದು ತೀರ್ಪು ನೀಡಿದ ನ್ಯಾಯ ಪಂಚಾಯ್ತಿ, ಅದೇ ವೇಳೆ "ಕದ್ದು ತಿಂದವನ ಹೆಂಡತಿಯ ಮೇಲೂ ನನಗೆ ಆಸೆ ಇದೆ, ಅದಕ್ಕೂ ಅನುಮತಿ ಕೊಡಿ" ಎಂದು ಸಾವುಕಾರ ಹೇಳಿದ ಆ ಕ್ರೂರ ಮಾತು ಅದು ಅತ್ಯಾಚಾರದಷ್ಟೇ ಸಮಾನವಾದ ಮನಸ್ಥಿತಿಯ ಪ್ರತೀಕವಾಗಿತ್ತು. ಇಂತಹ ಅನೇಕ ಜೀವಂತ ನಿದರ್ಶನಗಳ ಪ್ರತಿನಿಧಿತ್ವವೇ 'ಲ್ಯಾಂಡ್ ಲಾರ್ಡ್'.

ಚಿತ್ರವನ್ನು ನೋಡುತ್ತಾ ಹೋದಂತೆ ಹಳ್ಳಿಕೇರಿ, ಹಾಳಕೇರಿ, ರೋಣದ 'ಭೂಮಿ ಬೇಕು' ರೈತ ಆಂದೋಲನ, ಇನಾಮವೀರಾಪುರ ಘಟನೆ, ಕಂಬಾಳಪಳ್ಳಿ-ಹಂಗರಹಳ್ಳಿ ಹತ್ಯಾಕಾಂಡಗಳು ಒಂದೊಂದಾಗಿ ಸ್ಮೃತಿ ಪಟಲದಲ್ಲಿ ಪ್ಲೇ ಆದವು. ಇವುಗಳೆಲ್ಲವೂ ಕೇವಲ ಇತಿಹಾಸವಲ್ಲ; ಇನ್ನೂ ಹಸಿಹಸಿಯಾಗಿ ನಮ್ಮ ಸಮಾಜವನ್ನು ಕಾಡುತ್ತಿರುವ ಸತ್ಯಗಳು.




ಬದುಕಲು ಬೇಕಾದ ಅನ್ನಕ್ಕಾಗಿ ಕೈಯೊಡ್ಡಿ ಬೇಡಬೇಕು, ಆದರೆ ಅನ್ನ ಬೆಳೆಯುವ ಭೂಮಿಯ ಮೇಲೆ ಹಕ್ಕು ಇರಬಾರದು ಎಂಬ ಜಮೀನ್ದಾರರ ವಿಕೃತ ಮನಸ್ಸು; ದಲಿತರಿಗೆ ಭೂಮಿ ಒಡೆತನ ಇರಬಾರದೆಂಬ ಕಾರಣಕ್ಕೆ ದೇವರ ಹೆಸರಿನಲ್ಲಿ, ಜಾತಿಯ ಹೆಸರಿನಲ್ಲಿ ವಿಧಿಸಲಾಗುವ ನಾನಾ ಕಟ್ಟಳೆಗಳು; ದಿನನಿತ್ಯದ ಬದುಕಿನಲ್ಲಿ ಸಹಜವಾಗಿ ಹಾಸುಹೊಕ್ಕಾಗಿರುವ ದೌರ್ಜನ್ಯಗಳು ಈ ಎಲ್ಲವನ್ನೂ 'ಲ್ಯಾಂಡ್ ಲಾರ್ಡ್' ತನ್ನ ಕಥಾಹಂದರದಲ್ಲಿ ಗಂಭೀರವಾಗಿ ಹಿಡಿದಿಟ್ಟಿದೆ. ಅದಕ್ಕೇ ಈ ಚಿತ್ರ ಮನಮುಟ್ಟುತ್ತದೆ.

ರಾಜಕೀಯ, ಸಾಮಾಜಿಕ ಹಾಗೂ ಆರ್ಥಿಕ ಶೋಷಣೆಯನ್ನು ಎದುರಿಸಲು ಪಾರಂಪರಿಕ ಕಂದಾಚಾರಗಳನ್ನು ಮೀರಿ, ಸಂವಿಧಾನದ ಮಾರ್ಗದ ಮೂಲಕ ಮುಕ್ತಿಯತ್ತ ಸಾಗಬೇಕು ಎಂಬ ಬಲವಾದ ಸಂದೇಶವನ್ನು ಈ ಚಿತ್ರ ನೀಡುತ್ತದೆ. ಶೋಷಣೆಯ ವಿರುದ್ಧ ಸಂವಿಧಾನವೇ ಶಸ್ತ್ರ ಎಂಬ ಅರಿವು ಮೂಡಿಸುತ್ತದೆ.

ನಾನು ಸಂವಿಧಾನದ ಕಾಲಾಳು ಆಗಿ, ಸಂವಿಧಾನ ರಕ್ಷಣೆಗೆ ಸಿದ್ಧವೆಂದು ಸಹಿ ಮಾಡಿರುವ ವ್ಯಕ್ತಿಯಾಗಿ, ಈ ಚಿತ್ರ ನನಗೆ ವಿಶೇಷ ಸಂತಸ ತಂದಿದೆ. ಇಂದಿನ ತುರ್ತು ಅಗತ್ಯವೇನೆಂದರೆ ಪ್ರತಿ ಮನೆಮನೆಯಲ್ಲೂ ಸಂವಿಧಾನದ ಆಶಯವನ್ನು ತಲುಪಿಸುವ ಚಿಂತನೆ ಮತ್ತು ಚಳವಳಿ. ಇಂತಹ ಸಾಮಾಜಿಕ ಹೊಣೆಗಾರಿಕೆಯ ಸಿನಿಮಾಗಳು ಇನ್ನಷ್ಟು ಹೆಚ್ಚು ಬರಬೇಕು. 'ಲ್ಯಾಂಡ್ ಲಾರ್ಡ್' ಅದಕ್ಕೆ ಒಂದು ಮಹತ್ವದ ಉದಾಹರಣೆ.



**–ಬಸವರಾಜ .ನಿಂ. ಸಂಶಿ, ವಕೀಲರು.**

# ವಿಶೇಷ ಹೈಟೆಕ್ ತರಬೇತಿ ಶಿಬಿರ ಇಂದು

**■ವಿಜಯಸಾಕ್ಷಿ ಸುದ್ದಿ, ಗದಗ**

ಸಹಕಾರ ಇಲಾಖೆ ಗದಗ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ಬೆಂಗಳೂರು, ಗದಗ ಜಿಲ್ಲಾ ಸಹಕಾರ ಯೂನಿಯನ್ ಹಾಗೂ ಕೆ.ಸಿ.ಸಿ ಬ್ಯಾಂಕ್ ಧಾರವಾಡ ಇವರುಗಳ ಸಂಯುಕ್ತಾಶ್ರಯದಲ್ಲಿ ಗದಗ ಜಿಲ್ಲೆಯ ಕೆ.ಸಿ.ಸಿ ಬ್ಯಾಂಕ್ ಶಾಖೆಗಳ ಅಧಿಕಾರಿ ಹಾಗೂ ಸಿಬ್ಬಂದಿಗಳಿಗೆ ರಾಜ್ಯ ಮಟ್ಟದ ವಿಶೇಷ ಹೈಟೆಕ್ ತರಬೇತಿ ಶಿಬಿರವನ್ನು ಫೆ. 1ರಂದು ಮುಂಜಾನೆ 9 ಗಂಟೆಗೆ ಲೋಟಸ್-ಇನ್ ಹೊಟೇಲ್ ಸಭಾಭವನದಲ್ಲಿ ಜರುಗಲಿದೆ.

ಕೆ.ಸಿ.ಸಿ ಬ್ಯಾಂಕ್ ಧಾರವಾಡ ಅಧ್ಯಕ್ಷರು ಹಾಗೂ ಯೂನಿಯನ್‌ನ ನಿರ್ದೇಶಕರಾದ ಶಿವಕುಮಾರಗೌಡ ಎಸ್.ಪಾಟೀಲ ಕಾರ್ಯಕ್ರಮವನ್ನು ಉದ್ಘಾಟಿಸುವರು. ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ಉಪಾಧ್ಯಕ್ಷ ಜಗದೀಶ ಎಂ.ಕವಟಗಿಮಠ ಅಧ್ಯಕ್ಷತೆ ವಹಿಸುವರು.

ರಾಜ್ಯ ಸಹಕಾರ ಮಹಾಮಂಡಳದ ನಿರ್ದೇಶಕರುಗಳಾದ ಜಿ.ಪಿ. ಪಾಟೀಲ, ಬಸವರಾಜ ಎನ್.ಅರಬಗೊಂಡ, ಬಾಪುಗೌಡ ಡಿ.ಪಾಟೀಲ, ಗದಗ ಜಿಲ್ಲಾ ಸಹಕಾರ ಯೂನಿಯನ್ ಅಧ್ಯಕ್ಷ ಸಿ.ಎಂ. ಪಾಟೀಲ, ಧಾರವಾಡ ಕೆ.ಸಿ.ಸಿ. ಬ್ಯಾಂಕ್ ನಿರ್ದೇಶಕರುಗಳಾದ ಎಂ.ಎಫ್. ಕಲಗುಡಿ, ಗೋವಿಂದಗೌಡ ವ್ಹಿ.ಪಾಟೀಲ, ಎಂ.ಎಸ್. ಪಾಟೀಲ, ಸಿ.ಬಿ. ದೊಡ್ಡಗೌಡ್ರ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ವ್ಯವಸ್ಥಾಪಕ ನಿರ್ದೇಶಕ ಕೆ.ಎಸ್. ನವೀನ್, ಕಾರ್ಯದರ್ಶಿ ಅಶ್ವತ್ಥನಾರಾಯಣ, ಕೆ.ಸಿ.ಸಿ. ಬ್ಯಾಂಕ್ ಧಾರವಾಡದ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಸುನಿತಾ ಸಿದ್ರಾಮ, ಸಹಕಾರ ಸಂಘಗಳ ಮಾರಾಟಾಧಿಕಾರಿ ಬಿ.ಆರ್. ನಿಡಗುಂದಿ, ಕೆ.ಸಿ.ಸಿ. ಬ್ಯಾಂಕ್ ಪ್ರಧಾನ ವ್ಯವಸ್ಥಾಪಕ ಎಸ್.ವ್ಹಿ. ಹೂಗಾರ, ಕೆ.ಸಿ.ಸಿ. ಬ್ಯಾಂಕ್ ಗದಗ ಜಿಲ್ಲಾ ನಿಯಂತ್ರಣಾಧಿಕಾರಿ ಎಸ್.ಎಂ. ಚಿಕ್ಕಮಠ, ಸಹಕಾರ ಮಹಾಮಂಡಳ ಸಹಕಾರ ಶಿಕ್ಷಣಾಧಿಕಾರಿ ಶರಣಬಸಪ್ಪ ಜಿ.ಕಾಟ್ರಳ್ಳಿ ಪಾಲ್ಗೊಳ್ಳುವರು.

ತರಬೇತಿ ಕಾರ್ಯಾಗಾರದಲ್ಲಿ ಕರ್ನಾಟಕ ಗ್ರಾಮೀಣ ಬ್ಯಾಂಕ್ ನಿವೃತ್ತ ಪ್ರಾದೇಶಿಕ ವ್ಯವಸ್ಥಾಪಕ ಸಿದ್ದರಾಮೇಗೌಡ, ಕರ್ನಾಟಕ ರಾಜ್ಯ ಸಹಕಾರ ಅಪೆಕ್ಸ್ ಬ್ಯಾಂಕ್ ವಿಶ್ರಾಂತ ವ್ಯವಸ್ಥಾಪಕ ಎಸ್.ಜಿ. ಕುಲಕರ್ಣಿ ಉಪನ್ಯಾಸ ನೀಡಲಿದ್ದಾರೆ.

**ರೋಣ ತಾಲೂಕಿನಲ್ಲಿ ಫೆ. 1ರಿಂದ 28ರವರೆಗೆ ಕರವಸೂಲಿ ಮಾಸಾಚರಣೆ**

# ಶೇ. 100 ತೆರಿಗೆ ವಸೂಲಿಗೆ ಕಠಿಣ ನಿರ್ದೇಶನ






> ರೋಣ ತಾಲೂಕಿನಲ್ಲಿ ಶೇ. 100ರಷ್ಟು ತೆರಿಗೆ ವಸೂಲಿ ಸಾಧಿಸುವ ಉದ್ದೇಶದಿಂದ ಫೆಬ್ರವರಿ 1ರಿಂದ 28ರವರೆಗೆ ತಾಲೂಕಿನ 22 ಗ್ರಾಮ ಪಂಚಾಯಿತಿಗಳಲ್ಲಿ ಕರವಸೂಲಿ ಮಾಸಾಚರಣೆ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ. ಈ ಅವಧಿಯಲ್ಲಿ ಗ್ರಾ.ಪಂನ ಎಲ್ಲಾ ಸಿಬ್ಬಂದಿಗಳು ಕಡ್ಡಾಯವಾಗಿ ಹಾಜರಾಗಿ ತೆರಿಗೆ ವಸೂಲಾತಿ ಪ್ರಕ್ರಿಯೆಯಲ್ಲಿ ಭಾಗವಹಿಸಬೇಕು. ಅಭಿಯಾನದ ವೇಳೆ ಯಾವುದೇ ಸಿಬ್ಬಂದಿಗಳಿಗೆ ರಜೆ ಇರುವುದಿಲ್ಲ. ಅನಧಿಕೃತವಾಗಿ ಗೈರು ಹಾಜರಾದ ಅಧಿಕಾರಿಗಳು ಹಾಗೂ ಸಿಬ್ಬಂದಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲಾಗುವುದು.
>
> **– ಚಂದ್ರಶೇಖರ ಬಿ.ಕಂದಕೂರ.**
> ಕಾರ್ಯನಿರ್ವಾಹಕ ಅಧಿಕಾರಿಗಳು,
> ತಾ.ಪಂ-ರೋಣ.

**■ವಿಜಯಸಾಕ್ಷಿ ಸುದ್ದಿ, ರೋಣ**

ಆರ್ಥಿಕ ವರ್ಷದ ಅಂತ್ಯಕ್ಕೆ ಕೇವಲ ಎರಡು ತಿಂಗಳು ಮಾತ್ರ ಬಾಕಿಯಿದ್ದು, ರೋಣ ತಾಲೂಕಿನ 22 ಗ್ರಾಮ ಪಂಚಾಯಿತಿಗಳಲ್ಲಿ ಫೆಬ್ರವರಿ 1ರಿಂದ 28ರವರೆಗೆ ಒಂದು ತಿಂಗಳ ಕಾಲ ನಿರಂತರ ಕರವಸೂಲಿ ಮಾಸಾಚರಣೆ ಅಭಿಯಾನವನ್ನು ಹಮ್ಮಿಕೊಂಡು ಶೇ. 100ರಷ್ಟು ತೆರಿಗೆ ವಸೂಲಿ ಸಾಧಿಸಬೇಕೆಂದು ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಕಂದಕೂರ ಗ್ರಾ.ಪಂ ಸಿಬ್ಬಂದಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.

ಈ ಕುರಿತು ತಾಲೂಕಿನ ಕಾರ್ಯ ನಿರ್ವಾಹಕ ಕಛೇರಿಯಲ್ಲಿ ಸಿಬ್ಬಂದಿಗಳ ಜೊತೆ ಸಭೆ ನಡೆಸಿ ಪತ್ರಿಕಾ ಹೇಳಿಕೆ ನೀಡಿರುವ ಅವರು, ಫೆಬ್ರವರಿ ತಿಂಗಳ ಸಂಪೂರ್ಣ ಅವಧಿಯಲ್ಲಿ ತಾಲೂಕಿನ ಎಲ್ಲಾ ಗ್ರಾ.ಪಂಗಳಲ್ಲಿ ಬೆಳಿಗ್ಗೆ 6 ಗಂಟೆಯಿಂದ ಸಂಜೆಯವರೆಗೂ ತೆರಿಗೆ ವಸೂಲಾತಿ ಕಾರ್ಯವನ್ನು ತೀವ್ರಗೊಳಿಸಬೇಕು ಎಂದು ತಿಳಿಸಿದ್ದಾರೆ. ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ಕಾರ್ಯದರ್ಶಿಗಳು, ದ್ವಿತೀಯ ದರ್ಜೆ ಲೆಕ್ಕ ಸಹಾಯಕರು, ಕರವಸೂಲಿಗಾರರು, ಗಣಕಯಂತ್ರ ನಿರ್ವಾಹಕರು, ವಾಟರ್‌ಮನ್‌ಗಳು, ಸಿಪಾಯಿಗಳು ಸೇರಿದಂತೆ ಎಲ್ಲಾ ಸಿಬ್ಬಂದಿಗಳು ಒಂದೇ ತಂಡವಾಗಿ ಕಾರ್ಯನಿರ್ವಹಿಸಿ ಗರಿಷ್ಠ ಪ್ರಮಾಣದಲ್ಲಿ ತೆರಿಗೆ ಸಂಗ್ರಹ ಮಾಡಬೇಕು ಎಂದು ಸೂಚಿಸಿದ್ದಾರೆ.

ತಾಲೂಕಿನಲ್ಲಿ ಕಳೆದ ಮೂರು ವರ್ಷಗಳಿಂದ ತೆರಿಗೆ ಪಾವತಿಸದೇ ಬಾಕಿ ಉಳಿಸಿಕೊಂಡಿರುವ ಎಲ್ಲಾ ಆಸ್ತಿ ಮಾಲೀಕರನ್ನು ಗುರುತಿಸಿ ತಕ್ಷಣವೇ ನೋಟೀಸ್ ಜಾರಿ ಮಾಡಬೇಕು. ಪಂಚತಂತ್ರ 2.0 ತಂತ್ರಾಂಶದಲ್ಲಿ ಲಭ್ಯವಿರುವ ಮಾಹಿತಿಯನ್ನು ಆಧರಿಸಿ ಬಾಕಿಯಿರುವ ಸಂಪೂರ್ಣ ತೆರಿಗೆ ಮೊತ್ತವನ್ನು ಫೆಬ್ರವರಿ ತಿಂಗಳೊಳಗೆ ವಸೂಲಿ ಮಾಡಬೇಕು ಎಂದು ಅವರು ಸೂಚಿಸಿದ್ದಾರೆ.

ಬಾಕಿ ಉಳಿಸಿಕೊಂಡಿರುವ ಕನಿಷ್ಠ 200 ಆಸ್ತಿ ಮಾಲೀಕರಿಗೆ ತಗಾದೆ ನೋಟೀಸ್ ಜಾರಿ ಮಾಡಿ, ಅಭಿಯಾನದ ಅವಧಿಯಲ್ಲೇ ಸಂಪೂರ್ಣ ತೆರಿಗೆ ವಸೂಲಿ ಮಾಡಬೇಕು. ತೆರಿಗೆ ಪಾವತಿಸದೇ ಬಾಕಿ ಉಳಿಸಿಕೊಂಡಿರುವ ಮೊಬೈಲ್ ಟವರ್ ಕಂಪನಿಗಳು, ಅಂಗಡಿ ಮಾಲೀಕರು, ಉದ್ಯಮಿಗಳು ಹಾಗೂ ಸರ್ಕಾರಿ ನೌಕರರಿಂದ ಶೇ. 100ರಷ್ಟು ತೆರಿಗೆ ಬಾಕಿ ವಸೂಲಿ ಮಾಡುವಂತೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದ್ದಾರೆ.

ಕರವಸೂಲಿ ಅಭಿಯಾನದ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸುವ ಸಲುವಾಗಿ, ಗ್ರಾಮ ಪಂಚಾಯಿತಿ ವ್ಯಾಪ್ತಿಯ ಎಲ್ಲಾ ಗ್ರಾಮಗಳಲ್ಲಿ ಸ್ವಚ್ಛ ವಾಹಿನಿ ಹಾಗೂ ಡಂಗೂರ ಸಾರುವ ಮೂಲಕ ವ್ಯಾಪಕ ಪ್ರಚಾರ ನೀಡಬೇಕು. ಜೊತೆಗೆ ಅಭಿಯಾನದಲ್ಲಿ ಎಲ್ಲಾ ಚುನಾಯಿತ ಪ್ರತಿನಿಧಿಗಳನ್ನು ಸಕ್ರಿಯವಾಗಿ ಭಾಗಿಯಾಗಿಸಿಕೊಂಡು, ವಾರ್ಡ್‌ವಾರು ಸಾರ್ವಜನಿಕರನ್ನು ಮನವೊಲಿಸಿ ತೆರಿಗೆ ಪಾವತಿಗೆ ಪ್ರೇರೇಪಿಸುವಂತೆ ಸೂಚಿಸಿದ್ದಾರೆ.

# ಬಾಲಲೀಲಾ ಮಾಹಾಂತ ಶಿವಯೋಗಿಗಳು ವೈರಾಗ್ಯ ಮೂರ್ತಿ



**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಬಾಲಲೀಲಾ ಮಾಹಾಂತ ಶಿವಯೋಗಿಗಳು ವೈರಾಗ್ಯ ನಿಧಿಯಾಗಿದ್ದರು ಎಂದು ಹುಬ್ಬಳ್ಳಿ ಮೂರುಸಾವಿರಮಠದ ಜಗದ್ಗುರು ಡಾ. ಗುರುಸಿದ್ದ ರಾಜಯೋಗೀಂದ್ರ ಮಾಹಾಸ್ವಾಮಿಗಳು ಹೇಳಿದರು.

ಅವರು ಪಟ್ಟಣದ ಬಾಲಲೀಲಾ ಮಾಹಾಂತ ಶಿವಯೋಗಿಗಳ 167ನೇ ಜಾತ್ರಾ ಮಹೋತ್ಸವದ ಉದ್ಘಾಟನಾ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿ, ಮೈಸೂರ ಮುಮ್ಮಡಿ ಕೃಷ್ಣರಾಜ ಒಡೆಯರ ರೋಗಭಾದೆಯನ್ನು ದೂರ ಮಾಡಿದಾಗ ಶಿವಯೋಗಿಗಳಿಗೆ ಮುತ್ತು-ರತ್ನಗಳನ್ನು ನೀಡಿದಾಗ ಅದನ್ನು ಸ್ವಿಕರೀಸದೇ ಕೇವಲ ಕುಂಬಳಕಾಯಿಯನ್ನು ಮಾತ್ರ ಪಡೆದ ಮಾಹಾ ತಪಸ್ವಿ, ವೈರಾಗ್ಯ ಮೂರ್ತಿ, ವೈರಾಗ್ಯನಿಧಿಯಾಗಿದ್ದಾರೆ. ಇಂತಹ ಪುಣ್ಯಾತ್ಮರ ಪುಣ್ಯ ಭೂಮಿಯಲ್ಲಿ ಜನಿಸಿದ ನಾವೆಲ್ಲರೂ ಧನ್ಯರು ಎಂದರು.

ಮಾಜಿ ಶಾಸಕ ಡಿ.ಆರ್. ಪಾಟೀಲ ಮಾತನಾಡಿ, ಇಂದು ಶ್ರೇಷ್ಠ ರಾಜಕಾರಣಿಯಾಗಬೇಕು ಎಂದರೆ, 12ನೇ ಶತಮಾನದ ಸಂತರು ಮಾಹಾಂತರು, ಶ್ರೀ ಬಾಲಲೀಲಾ ಮಾಹಾಂತ ಶಿವಯೋಗಿಗಳ ದಾರಿಯಲ್ಲಿ ಸಾಗಿದಾಗ ಮಾತ್ರ ಸಾಧ್ಯವಾಗುತ್ತದೆ ಎಂದರು.

ಶ್ವೇತಾ ದೊಟಿಕಲ್ ಹಾಗೂ ವಿಜಯಲಕ್ಷ್ಮೀ ಹಿರೇಮಠ ವಚನ ಸಂಗೀತ ಹಾಡಿದರೆ, ಶಾಲಾ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

ಕಾರ್ಯಕ್ರಮವನ್ನು ರಮಜಾನ್ ದರ್ಗಾ ಉದ್ಘಾಟಿಸಿದರು. ಸಮ್ಮುಖವನ್ನು ಶಿವಮೊಗ್ಗ ಜಿಲ್ಲೆಯ ಜಡೆ ಸಂಸ್ಥಾನಮಠದ ಡಾ. ಮಾಹಾಂತ ಮಾಹಾಸ್ವಾಮಿಗಳು ವಹಿಸಿದ್ದರು. ಶಿವಮೊಗ್ಗ ಅಲ್ಲಮಪ್ರಭು ಹೊಳೆಮಠ ನಾಗಭೂಷಣ ಮಾಹಾಸ್ವಾಮಿಗಳು, ಗುಡ್ಡದನ್ವೇರಿಯ ಶಿವಯೋಗೀಶ್ವರ ಮಾಹಾಸ್ವಾಮೀಜಿ, ನೀಲಗುಂದ ಗುದ್ನೇಶ್ವರಮಠದ ಪ್ರಭುಲಿಂಗ ದೇವರು, ಗುರಣ್ಣಾ ಬಳಗಾನೂರ, ಪ್ರೊ. ಡಿ.ಎಂ. ಹಿರೇಮಠ, ಜಾತ್ರಾ ಸಮಿತಿ ಅಧ್ಯಕ್ಷ ಗಂಗಪ್ಪ ಸುಂಕಾಪೂರ ಇದ್ದರು.

# ಲಕ್ಕುಂಡಿಯ ಐತಿಹಾಸಿಕ ದೇವಸ್ಥಾನಗಳ ಅಭಿವೃದ್ಧಿಗೆ 10 ಕೋಟಿ: ಡಿಸಿ ಸಿ.ಎನ್. ಶ್ರೀಧರ್

▶▶ಮೊದಲನೇ ಪುಟದಿಂದ

ಇದು ಸಂಪೂರ್ಣವಾಗಿ ಕೇಂದ್ರ ಪುರಾತತ್ವ ಇಲಾಖೆಯ ಜವಾಬ್ದಾರಿ" ಎಂದು ಡಿಸಿ ಸಿ.ಎನ್. ಶ್ರೀಧರ್ ಹೇಳಿದರು. ಇನ್ನೂ, 2025-26ನೇ ಸಾಲಿನಲ್ಲಿ ಲಕ್ಕುಂಡಿಯ ಆರು ಐತಿಹಾಸಿಕ ದೇವಸ್ಥಾನಗಳ ಅಭಿವೃದ್ಧಿಗೆ 10 ಕೋಟಿ ಅನುದಾನ ಮೀಸಲಿಡಲಾಗಿದೆ ಎಂದು ಮಾಹಿತಿ ನೀಡಿದರು. ರಾಜ್ಯ ಹಾಗೂ ಕೇಂದ್ರ ಪುರಾತತ್ವ ಅಧಿಕಾರಿಗಳ ವರದಿ ಬಂದ ನಂತರ ಆದ್ಯತೆ ಮೇರೆಗೆ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತದೆ ಎಂದು ಅವರು ಹೇಳಿದರು.

ಒಕ್ಕಲೆಬ್ಬಿಸುವ ಪರಿಸ್ಥಿತಿ ನಿರ್ಮಾಣವಾದಲ್ಲಿ ಸೂಕ್ತ ಪರಿಹಾರ ನೀಡಲಾಗುತ್ತದೆ. ಸ್ಥಳಾಂತರದ ಕುರಿತಂತೆ ಅಂತಿಮ ತೀರ್ಮಾನವನ್ನು ಕಾಲವೇ ನಿರ್ಧರಿಸಲಿದೆ ಎಂದು ಡಿಸಿ ತಿಳಿಸಿದರು.

# ಎನ್‌ಎಂಎಂಎಸ್ ಪರೀಕ್ಷೆ ಇಂದು

**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ಜಿಲ್ಲೆಯ ಸರಕಾರಿ, ಅನುದಾನಿತ ಹಾಗೂ ಸ್ಥಳೀಯ ಸಂಸ್ಥೆಗಳ ಶಾಲೆಗಳಲ್ಲಿ 8ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ನೀಡಲು ನಡೆಸುವ ಎನ್‌ಎಂಎಂಎಸ್ ಫೆ. 1ರಂದು ನಡೆಯಲಿದೆ.

ಧಾರವಾಡ ಜಿಲ್ಲೆಯಲ್ಲಿ ಧಾರವಾಡದಲ್ಲಿ-6, ಹುಬ್ಬಳ್ಳಿಯಲ್ಲಿ-6, ನವಲಗುಂದ-2, ಕುಂದಗೋಳ-2, ಕಲಘಟಗಿ-4 ಹೀಗೆ ಒಟ್ಟು 20 ಪರೀಕ್ಷಾ ಕೇಂದ್ರಗಳನ್ನು ಗುರುತಿಸಲಾಗಿದ್ದು, ಒಟ್ಟು



5,980 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗುವರು ಡಯಟ್ ಪ್ರಾಚಾರ್ಯ ಬಸವರಾಜ ನಾಲತವಾಡ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹಾಲಕೆರೆಯಲ್ಲಿ ಫ್ಲೋರೊಸಿಸ್ ತಪಾಸಣಾ ಶಿಬಿರ



**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಸಮೀಪದ ಹಾಲಕೆರೆ ಗ್ರಾಮದಲ್ಲಿ ನಿಡಗುಂದಿ ಪ್ರಾಥಮಿಕ ಆರೋಗ್ಯದ ಕೇಂದ್ರದಿಂದ ಫ್ಲೋರೊಸಿಸ್ ತಪಾಸಣಾ ಶಿಬಿರವನ್ನು ಏರ್ಪಡಿಸಲಾಗಿತ್ತು.

ಕಾರ್ಯಕ್ರಮದಲ್ಲಿ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಕೆ.ಎ. ಬೂದಿಹಾಳ ಮಾತನಾಡಿ, ಫ್ಲೋರೊಸಿಸ್ ಕುಡಿಯುವ ನೀರು ಅಥವಾ ಆಹಾರದ ಮೂಲಕ ಮನುಷ್ಯನ ದೇಹವನ್ನು ಪ್ರವೇಶಿಸುತ್ತದೆ. ಅತಿಯಾದ ಫ್ಲೋರೈಡ್ ಸೇವನೆಯಿಂದ ಅನೇಕ ರೋಗಗಳು ಉತ್ಪತ್ತಿಯಾಗುತ್ತವೆ. ಇದಕ್ಕೆ ದೇಹದಲ್ಲಿನ ಫ್ಲೋರೊಸಿಸ್ ಕಾರಣವಾಗುತ್ತದೆ.


ಇದು ಮುಖ್ಯವಾಗಿ ಹಲ್ಲು ಮತ್ತು ಮೂಳೆಗಳ ಮೇಲೆ ಹೆಚ್ಚಿನ ಪರಿಣಾಮ ಬೀರಿ ಅವುಗಳನ್ನು ದುರ್ಬಲಗೊಳಿಸುತ್ತದೆ. ಆದ್ದರಿಂದ ಯಾವಾಗಲೂ ಶುದ್ಧ ನೀರು ಮತ್ತು ಆಹಾರವನ್ನು ಸೇವನೆ ಮಾಡಬೇಕೆಂದು ಹೇಳಿದರು.

ಡಾ. ಹೊಸಮನಿ ಮಾತನಾಡಿ, ಮೂಳೆಗಳ ಮೇಲೆ ಫ್ಲೋರೊಸಿಸ್ ಸಂಗ್ರಹಣೆಯಾಗುವದರಿಂದ ಅದು ಮೂಳೆಗಳನ್ನು ಸವೆಸುತ್ತದೆ.

ಇದರಿಂದ ಕೈಕಾಲುಗಳು ಬಾಯುತ್ತವೆ. ಇದನ್ನು ತಪ್ಪಿಸಲು ನೀರನ್ನು ಕಾಯಿಸಿ, ಆರಿಸಿ ಕುಡಿಯಬೇಕೆಂದರು.

ಶಿಬಿರದಲ್ಲಿ 40 ಜನರ ಆರೋಗ್ಯ ತಪಾಸಣೆ ನಡೆಯಿತು. ಮೂಳೆ ತಜ್ಞ ಡಾ. ಶಕೀಲ ಅಹ್ಮದ, ಡಾ. ಈರಣ್ಣ ಪಟ್ಟಣಶೆಟ್ಟಿ, ಬಿ.ಎಚ್. ಅರಕೇರಿ, ರಾಹುಲ್ ಶೆಟ್ಟಿ ಮತ್ತು ಆಶಾ ಕಾರ್ಯಕರ್ತೆಯರು ಉಪಸ್ಥಿತರಿದ್ದರು.

# ಬ್ರಹ್ಮಚೈತನ್ಯ ಮಹಾರಾಜರು ಆಧ್ಯಾತ್ಮಿಕ ಸೂರ್ಯ



**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ರಾಮ ನಾಮದ ಮೂಲಕ ಜಗತ್ತಿನ ಜನರನ್ನು ಉದ್ಧರಿಸಲು ಅವತರಿಸಿ ಬಂದ ಸದ್ಗುರು ಶ್ರೀ ಬ್ರಹ್ಮಚೈತನ್ಯರು ಆಧ್ಯಾತ್ಮಿಕ ಸೂರ್ಯರಾಗಿದ್ದಾರೆ. ತ್ರಯೋದಶಾಕ್ಷರಿ ಮಂತ್ರವನ್ನು ಬೋಧಿಸುವ ಮೂಲಕ ಸದ್ಗತಿ ಪಡೆಯಬಹುದು ಎಂಬುದನ್ನು ಸಾಧಿಸಿ ತೋರಿದವರು ಅವರು ಎಂದು ನಿವೃತ್ತ ಮುಖ್ಯ ಶಿಕ್ಷಕ ಅರುಣ ಕುಲಕರ್ಣಿ ಹೇಳಿದರು.

ಪಟ್ಟಣದ ಶ್ರೀ ದತ್ತಾತ್ರೇಯ ದೇವಸ್ಥಾನದಲ್ಲಿ ಜರುಗಿದ ಶ್ರೀ ಬ್ರಹ್ಮಚೈತನ್ಯ ಮಹಾರಾಜರ ತೊಟ್ಟಿಲೋತ್ಸವದ ನಂತರ ಅವರು ಮಾತನಾಡಿದರು.

ತುಕಾಮಾಯಿ ಚೈತನ್ಯರಂತಹ ಗುರುಗಳ ಶಿಷ್ಯತ್ವವನ್ನು ಪಡೆದು, ಅವರು ನೀಡಿದ ಎಲ್ಲ ಪರೀಕ್ಷೆಗಳನ್ನೂ ದಾಟಿ, ಅವರಿಂದ ಬ್ರಹ್ಮಚೈತನ್ಯ ಎಂದು ನಾಮಾಂಕಿತರಾದವರು ಶ್ರೀಗುರುಗಳು. ಗೋಂದಾವಲೆ ಅವರ ಕಾರ್ಯಕ್ಷೇತ್ರವಾಗಿದ್ದರೂ ದೇಶಾದ್ಯಂತ ಸಂಚರಿಸಿ ರಾಮನಾಮದ ಸವಿಯನ್ನು ಜನತೆಗೆ ಹತ್ತಿಸುವಲ್ಲಿ ಬಹಳಷ್ಟು ಶ್ರಮಿಸಿ ಅದರಲ್ಲಿ ಯಶಸ್ವಿಯಾದರು.

ಅನೇಕ ಕಡೆಗಳಲ್ಲಿ ಶ್ರೀ ರಾಮಮಂದಿರಗಳನ್ನು ಸ್ಥಾಪನೆ ಮಾಡಿದ ಕೀರ್ತಿಯೂ ಅವರಿಗೆ ಸಲ್ಲುತ್ತದೆ. ಈ ಮೂಲಕ ಬರೀ ನಾಮನಾಮದ ಪಠಣೆಯಿಂದ ನೀವು ಮುಕ್ತಿಯನ್ನು ಕಾಣಬಹುದು ಎಂಬುದನ್ನು ಭಕ್ತ ಗಣಕ್ಕೆ ಸಾರಿ ಹೇಳಿದವರು ಶ್ರೀ ಬ್ರಹ್ಮಚೈತನ್ಯ ಮಹಾರಾಜರು ಎಂದರು.

ಸುಮಂಗಲೆಯರು ಶ್ರೀ ಮಹಾರಾಜರನ್ನು ತೊಟ್ಟಿಲಲ್ಲಿ ಹಾಕಿ ಜೋಗುಳ ಹಾಡಿದರು. ಈವೇಳೆ ಅರುಣ ಶ್ರೀವಲ್ಲಭಭಟ್ಟ ಸದರಜೋಷಿ, ಕುಲಕರ್ಣಿ(ಕುರಗಡ್ಡಿ), ಎಸ್.ಎಚ್. ಕುಲಕರ್ಣಿ, ಗುರುರಾಜ ಕುಲಕರ್ಣಿ, ಪ್ರಶಾಂತ ಗ್ರಾಮಪುರೋಹಿತ, ರಾಮಕೃಷ್ಣ ಸದರಜೋಷಿ, ಡಾ. ಸಪ್ನಾ ಕಾಳೆ, ಪೂಜಾ ಜೋಷಿ, ಪ್ರತೀಕ್ಷಾ ಕುಲಕರ್ಣಿ, ಜ್ಯೋತಿ ನಾಡಿಗೇರ, ಪಲ್ಲವಿ ಗ್ರಾಮಪುರೋಹಿತ, ಪ್ರಿಯಾ ಕುಲಕರ್ಣಿ, ಪದ್ಮಾ ಕುಲಕರ್ಣಿ, ಶ್ವೇತಾ ಕಾಳೆ, ವೀಣಾ ಗ್ರಾಮಪುರೋಹಿತ, ಸೀಮಾ ಕೊಂಡಿ, ರೂಪಾ ಗ್ರಾಮಪುರೋಹಿತ, ತನುಜಾ ಜೋಷಿ, ಕಮಲಾಬಾಯಿ ಸದರಜೋಷಿ, ಭಾರತಿಬಾಯಿ ಗ್ರಾಮಪುರೋಹಿತ, ಲಕ್ಷ್ಮೀ ಗ್ರಾಮಪುರೋಹಿತ, ಸನ್ಮತಿ ಸದರಜೋಷಿ, ಅಪೇಕ್ಷಾ ಕುರಂದವಾಡ, ಪರಿಮಳಾ ಗ್ರಾಮಪುರೋಹಿತ, ಶೋಭಾ ಸೂರಭಟ್ಟನವರ, ವೀಣಾ ಕುಲಕರ್ಣಿ, ಕವಿತಾ ಕುಲಕರ್ಣಿ, ರಾಜಶ್ರೀ ಕುಲಕರ್ಣಿ, ಶೋಭಾ ಕುಲಕರ್ಣಿ, ಪ್ರಭಾ ರಾಯಭಟ್ಟನವರ, ಅನಿತಾ ಗ್ರಾಮಪುರೋಹಿತ ಮುಂತಾದವರಿದ್ದರು.

**ತಾಲೂಕ ಕಾನಿಪ ಮೊದಲ ಸಾಮಾನ್ಯ ಸಭೆಯಲ್ಲಿ ಮಂಜುನಾಥ್ ರಾಠೋಡ**

# ಪತ್ರಿಕಾ ಭವನದ ಕನಸು ನನಸು ಮಾಡೋಣ!



* ಪತ್ರಿಕಾ ಭವನ ನಿರ್ಮಾಣ,
* ಪದಾಧಿಕಾರಿಗಳ ಪದಗ್ರಹಣ ಸಮಾರಂಭ,
* ನರೇಗಲ್ ಘಟಕ ರಚನೆ,
* ತಾಲೂಕು ಮಟ್ಟದ ಪತ್ರಕರ್ತರ ಪ್ರಶಸ್ತಿ ಪ್ರದಾನ,
* ಪತ್ರಕರ್ತರ ಕ್ಷೇಮಾಭಿವೃದ್ಧಿ

ಸಂಬಂಧಿಸಿದ ವಿಷಯಗಳ ಕುರಿತು ಚರ್ಚೆ ನಡೆಸಲಾಯಿತು.

**■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ**

ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘದ (ಕಾನಿಪ) ಪ್ರಥಮ ಸಾಮಾನ್ಯ ಸಭೆಯು ಶನಿವಾರ ರೋಣ ರಸ್ತೆಯಲ್ಲಿನ ಪ್ರವಾಸಿ ಮಂದಿರದಲ್ಲಿ ನಡೆಯಿತು.

ಸಭೆಯ ಅಧ್ಯಕ್ಷತೆ ವಹಿಸಿದ್ದ ತಾಲೂಕಾ ಅಧ್ಯಕ್ಷ ಮಂಜುನಾಥ ಎಸ್. ರಾಠೋಡ ಮಾತನಾಡಿ, "ಗಜೇಂದ್ರಗಡ ತಾಲೂಕಿಗೆ ಸ್ವಂತ ಹಾಗೂ ಸುಸಜ್ಜಿತ ಪತ್ರಿಕಾ ಭವನ ಅಗತ್ಯವಾಗಿದೆ. ಈ ಕುರಿತು ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಚರ್ಚಿಸಿ, ಎಲ್ಲಾ ಪದಾಧಿಕಾರಿಗಳು ಒಂದಾಗಿ ಭವನ ನಿರ್ಮಾಣದ ಕನಸನ್ನು ನನಸು ಮಾಡೋಣ. ಭವನ ನಿರ್ಮಾಣವಾಗುವವರೆಗೆ ತಾತ್ಕಾಲಿಕವಾಗಿ ಪ್ರವಾಸಿ ಮಂದಿರದಲ್ಲೇ ಪತ್ರಿಕಾಗೋಷ್ಠಿ ಹಾಗೂ ಸಭೆಗಳನ್ನು ನಡೆಸೋಣ" ಎಂದು ಹೇಳಿದರು.

"ಪತ್ರಿಕಾಗೋಷ್ಠಿಗಳಲ್ಲಿ ಕಾನಿಪ ಸದಸ್ಯತ್ವ ಹೊಂದಿದ ಪತ್ರಕರ್ತರೇ ಭಾಗವಹಿಸುವಂತೆ ವ್ಯವಸ್ಥೆ ರೂಪಿಸಬೇಕು. ಸಂಘದ ಶ್ರೇಯೋಭಿವೃದ್ಧಿಗಾಗಿ ಪತ್ರಿಕಾಗೋಷ್ಠಿ ಆಯೋಜಕರಿಂದ ನಿಗದಿತ ರೀತಿಯ ಶುಲ್ಕ ಮಾಡಿ, ರಶೀದಿ ನೀಡುವ ಪಾರದರ್ಶಕ ವ್ಯವಸ್ಥೆ ಜಾರಿಗೆ ತರಬೇಕಿದೆ" ಎಂದು ಅವರು ತಿಳಿಸಿದರು.

ಬಳಿಕ ಮಾತನಾಡಿದ ಸಂಘದ ಕಾರ್ಯದರ್ಶಿ ಎಸ್.ಎಂ. ಸಯ್ಯದ್, "ತಾಲೂಕಾ ಪತ್ರಕರ್ತರ ಭವನ ನಿರ್ಮಾಣಕ್ಕೆ ಪದಾಧಿಕಾರಿಗಳು, ಸದಸ್ಯರು ಹಾಗೂ ದಾನಿಗಳ ಸಹಕಾರ ಅತ್ಯಂತ ಅವಶ್ಯಕವಾಗಿದೆ. ಈ ನಿಟ್ಟಿನಲ್ಲಿ ಎಲ್ಲರ ಅಭಿಪ್ರಾಯಗಳನ್ನು ಸಂಗ್ರಹಿಸಿ ಮುಂದಿನ ಸಭೆಯಲ್ಲಿ ಸಮಗ್ರವಾಗಿ ಚರ್ಚಿಸಲಾಗುವುದು" ಎಂದರು.

"ತಾತ್ಕಾಲಿಕವಾಗಿ ನಗರ ಪ್ರವಾಸಿ ಮಂದಿರದಲ್ಲಿ ಸಭೆಗಳು ಹಾಗೂ ಪತ್ರಿಕಾಗೋಷ್ಠಿಗಳನ್ನು ನಡೆಸುವುದರಿಂದ ಸಂಘಟಿತ ಚಟುವಟಿಕೆಗಳಿಗೆ ಬಲ ಸಿಗಲಿದೆ" ಎಂದು ಅವರು ಹೇಳಿದರು.

ಈ ಪೈಕಿ ಗಜೇಂದ್ರಗಡ ತಾಲೂಕು ಪತ್ರಿಕಾ ಭವನ ನಿರ್ಮಾಣಕ್ಕೆ ಸಭೆಯಲ್ಲಿ ಸಹಮತದ ನಿರ್ಧಾರ ವ್ಯಕ್ತವಾಯಿತು. ಇನ್ನುಳಿದಂತೆ ನರೇಗಲ್ ಘಟಕ ರಚನೆ ಹಾಗೂ ಪದಾಧಿಕಾರಿಗಳ ಪದಗ್ರಹಣ ಸಮಾರಂಭ ಕುರಿತು ಮುಂದಿನ ಸಭೆಯಲ್ಲಿ ಚರ್ಚಿಸಲು ತೀರ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಗಜೇಂದ್ರಗಡ ತಾಲೂಕು ಪತ್ರಕರ್ತರ ಕ್ಷೇಮಾಭಿವೃದ್ಧಿಗಾಗಿ ಮಂಜುನಾಥ ಎಸ್. ರಾಠೋಡ 15,001, ಜಗದೀಶ ಹೊಸಳ್ಳಿ 10,001, ಎಸ್.ಎಂ. ಸಯ್ಯದ್ 10,001, ಸೀತಲ ಓಲೇಕಾರ 5,001 ದೇಣಿಗೆ ನೀಡುವ ಮೂಲಕ ಸಂಘದ ಶ್ರೇಯೋಭಿವೃದ್ಧಿಗೆ ಭದ್ರ ಅಡಿಗಲ್ಲು ಹಾಕಿದರು. ಇನ್ನುಳಿದ ಸದಸ್ಯರು ಹಾಗೂ ದಾನಿಗಳು ಮುಂದಿನ ದಿನಗಳಲ್ಲಿ ಸಹಕಾರ ನೀಡಬೇಕೆಂದು ಮನವಿ ಮಾಡಲಾಯಿತು.

ಸಭೆಯಲ್ಲಿ ಕಾನಿಪ ಜಿಲ್ಲಾ ಕಾರ್ಯಕಾರಣಿ ಸದಸ್ಯ ಶಿವಕುಮಾರ ಶಶಿಮಠ, ತಾಲೂಕಾ ಉಪಾಧ್ಯಕ್ಷ ಮಲ್ಲಯ್ಯ ಗುಂಡಗೋಪುರಮಠ, ಪ್ರಾಣೇಶ ಕೊಡಗಾನೂರ, ಸೀತಲ ಓಲೇಕಾರ, ಜಗದೀಶ ಹೊಸಳ್ಳಿ, ಅಲ್ಲಾಭಕ್ಷಿ ನದಾಫ್, ವಿನಾಯಕ ಜೋಶಿ ಸೇರಿದಂತೆ ಹಲವು ಪತ್ರಕರ್ತರು ಉಪಸ್ಥಿತರಿದ್ದರು.

## 'ಅಮರ ಸ್ವರ ಸಮಾರೋಹ' ಕಾರ್ಯಕ್ರಮ ನಾಳೆ

■ವಿಜಯಸಾಕ್ಷಿ ಸುದ್ದಿ, ಗದಗ

ಉತ್ತರ ಕರ್ನಾಟಕ ಕಲಾವಿದರ ಹಾಗೂ ಕಲಾ ಪೋಷಕರ ಸಂಘಟನೆಯಾದ ಕಲಾ ವಿಕಾಸ ಪರಿಷತ್‌ನಿಂದ ಫೆ. 2ರಂದು ಮಧ್ಯಾಹ್ನ 3 ಗಂಟೆಗೆ ನಗರದ ಮುಂಡರಗಿ ರಸ್ತೆಯ ಚಿಕ್ಕಟ್ಟಿ ಸಭಾ ಭವನದಲ್ಲಿ ಗಾನಯೋಗಿ ಪಂಚಾಕ್ಷರಿ ಗವಾಯಿಗಳವರ 134ನೇ ಜಯಂತಿಯನ್ನು 'ಅಮರ ಸ್ವರ ಸಮಾರೋಹ'ವನ್ನಾಗಿಆಚರಿಸ ಲಾಗುತ್ತಿದೆ.

ಭಾರತೀಯ ಶಿಕ್ಷಣ ಸಂಸ್ಥೆಯ ಸಂಸ್ಥಾಪಕ ಪ್ರೊ. ಎಸ್.ವಾಯ್. ಚಿಕ್ಕಟ್ಟಿ ಕಾರ್ಯಕ್ರಮವನ್ನು ಉದ್ಘಾಟಿಸುವರು. ಅಧ್ಯಕ್ಷತೆಯನ್ನು ಕಲಾ ವಿಕಾಸ ಪರಿಷತ್ ಸಂಸ್ಥಾಪಕ ಅಧ್ಯಕ್ಷರಾದ ರವಿ ಎಲ್.ಗುಂಜೀಕರ್ ವಹಿಸುವರು. ಕಲಾ ವಿಕಾಸ ಪರಿಷತ್ ಅಧ್ಯಕ್ಷರಾದ ಸಿ.ಕೆ.ಹೆಚ್. ಶಾಸ್ತ್ರೀ (ಕಡಣಿ)ಇವರು ನುಡಿನಮನ ಸಲ್ಲಿಸುವರು.

ಇದೇ ಸಂದರ್ಭದಲ್ಲಿ ಬೆಂಗಳೂರಿನ, ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದ ರಾಜ್ಯ ಉಪಾಧ್ಯಕ್ಷರಾಗಿ ಆಯ್ಕೆಯಾಗಿರುವ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಬಸವರಾಜ ಬಳ್ಳಾರಿಯವರನ್ನು ಮತ್ತು ಎಲ್.ಎಲ್.ಎಮ್ ಪದವಿಯಲ್ಲಿ ರಾಜ್ಯಕ್ಕೆ



ಪ್ರಥಮ ಸ್ಥಾನ ಪಡೆದ ಗದುಗಿನ ಪ್ರತಿಭೆ ಸಹನಾ ಅನಂತ ಕಾರ್ಕಳ ಇವರನ್ನು ಸನ್ಮಾನಿಸಲಾಗುವುದು.

ಸಭಾ ಕಾರ್ಯಕ್ರಮದ ನಂತರ ವೀರೇಶ್ವರ ಪುಣ್ಯಾಶ್ರಮದ ಕುಮಾರ ಹಿರೇಮಠ ಗುತ್ತರಗಿ, ಧಾರವಾಡದ ಆಕಾಶವಾಣಿ, ದೂರದರ್ಶನ ಕಲಾವಿದೆ ಡಾ. ಸುಮಾ ಬಸವರಾಜ ಹಳಿಯಾಳ, ಕಲಾ ವಿಕಾಸ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ಮಮತಾ ಮಾಗಳ ಇವರಿಂದ ಸುಗಮ ಮತ್ತು ವಚನ ಸಂಗೀತ ಏರ್ಪಡಿಸಲಾಗಿದೆ. ಇವರಿಗೆ, ವೀರೇಶ್ವರ ಪುಣ್ಯಾಶ್ರಮದ ಶ್ರೀಕಾಂತ ಗಂಗಾವತಿ ತಬಲಾ ಸಾಥ್ ನೀಡಲಿದ್ದಾರೆ. ಗದುಗಿನ ಉದಯೋನ್ಮುಖ ಕಲಾವಿದೆ ತನಿಷಾ ಸತೀಶಕುಮಾರ ವಜ್ರೇಶ್ವರಿ ಇವರಿಂದ ಭರತನಾಟ್ಯ ಪ್ರದರ್ಶನವಿದೆ ಎಂದು ಪ್ರಕಟಣೆ ತಿಳಿಸಿದೆ.

**ವಿವೇಕಾನಂದಗೌಡ ಪಾಟೀಲರ ಮನೆಯ ಗ್ರಂಥಾಲಯ ಉದ್ಘಾಟಿಸಿದ ಡಾ. ಮಾನಸ ಅಭಿಮತ**

# ಪುಸ್ತಕಗಳು ಮನುಷ್ಯನ ನಿಜವಾದ ಸಂಗಾತಿ

■ವಿಜಯಸಾಕ್ಷಿ ಸುದ್ದಿ, ಗದಗ

ಪುಸ್ತಕದ ಜ್ಞಾನ ಮಸ್ತಕವ ತಲುಪಿದಾಗ ಸಿಗುವ ಆನಂದ ಅವರ್ಣನೀಯ. ಮನೆಗೊಂದು ಮಂದಿರ ಇರುವಂತೆ, ಗ್ರಂಥಾಲಯವೂ ಇರಬೇಕು. ಮನುಷ್ಯನ ನಿಜವಾದ ಸಂಗಾತಿ ಪುಸ್ತಕಗಳು. ಪುಸ್ತಕಗಳಿಗೆ ಕೊನೆ ಎಂಬುದಿಲ್ಲ ಎಂದು ಕನ್ನಡ ಪುಸ್ತಕ ಪ್ರಾಧಿಕಾರದ ಅಧ್ಯಕ್ಷ ಡಾ. ಮಾನಸ ತಿಳಿಸಿದರು.

ಅವರು ಕನ್ನಡ ಪುಸ್ತಕ ಪ್ರಾಧಿಕಾರ ಬೆಂಗಳೂರು, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಗದಗ ಹಾಗೂ ಜಿಲ್ಲಾ ಜಾಗೃತ ಸಮಿತಿ ಸಹಯೋಗದಲ್ಲಿ ಕಸಾಪ ಜಿಲ್ಲಾಧ್ಯಕ್ಷ ವಿವೇಕಾನಂದಗೌಡ ಪಾಟೀಲರ ಮನೆಯ ಗ್ರಂಥಾಲಯವನ್ನು ಉದ್ಘಾಟಿಸಿ ಮಾತನಾಡಿದರು.

ಕನ್ನಡ ವಚನ ಸಾಹಿತ್ಯ ಶ್ರೇಷ್ಠ ಸಾಹಿತ್ಯವಾಗಿದ್ದು, ಜನಸಾಮಾನ್ಯರು ತಮ್ಮ ಜೀವನಾನುಭವಗಳನ್ನು ದಾಖಲಿಸಿದ್ದಾರೆ. ಅಂತಹ ವಿಚಾರಗಳನ್ನು ತಿಳಿದುಕೊಂಡು ನಮ್ಮ ಬದುಕನ್ನು ಸಾರ್ಥಕಗೊಳಿಸಬೇಕೆಂದು ತಿಳಿಸಿದರು.




ನವನಗರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರಾದ ಡಿ.ಎಸ್. ತಳವಾರ ಮಾತನಾಡಿ, ಪ್ರತಿಯೊಂದು ಮನೆಯೂ ಗ್ರಂಥಾಲಯವನ್ನು ಹೊಂದುವ ಪರಿಕಲ್ಪನೆ ನಿಜಕ್ಕೂ ಮನುಷ್ಯನಲ್ಲಿ ಬದಲಾವಣೆ ತರಬಲ್ಲದು. ಪುಸ್ತಕಗಳು ಶಾಂತಿ, ನೆಮ್ಮದಿ, ಸಮಾಧಾನ ಮತ್ತು ಬದುಕುವ ಉತ್ಸಾಹವನ್ನು ಇಮ್ಮಡಿಗೊಳಿಸುತ್ತವೆ. ನಮ್ಮ ಬಡಾವಣೆಯಲ್ಲಿ ಹೆಚ್ಚು ಹೆಚ್ಚು ಮನೆಗಳಲ್ಲಿ ಗ್ರಂಥಾಲಯಗಳು ಸ್ಥಾಪಿತವಾಗಲಿ ಎಂಬ ಆಶಯವನ್ನು ವ್ಯಕ್ತಪಡಿಸಿದರು.

ಅಧ್ಯಕ್ಷತೆ ವಹಿಸಿದ್ದ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ, ಸಮೂಹ ಮಾಧ್ಯಮಗಳ ಭರಾಟೆಯಲ್ಲಿ ನಮ್ಮೊಳಗಿನ ಓದುಗನನ್ನು ಕಳೆದುಕೊಂಡು ನೋಡುಗರಾಗಿ ರೂಪಾಂತರ ಹೊಂದಿದ್ದೇವೆ. ಓದುವಾಗ ಕವಿ, ಸಾಹಿತಿಯೊಂದಿಗೆ ಆಗುವ ಮುಖಾಮುಖಿ ಸಂಬಂಧವನ್ನು ಕಳೆದುಕೊಂಡು ಅನಾಥ ಪ್ರಜ್ಞೆಯನ್ನು ಅನುಭವಿಸುತ್ತಿದ್ದೇವೆ. ವಿದ್ಯಾರ್ಥಿಗಳು ಕೇವಲ ಪಠ್ಯ-ಪುಸ್ತಕ್ಕೆ ಮತ್ತು ಅಂಕಗಳಿಗೆ ಮಾತ್ರ ಸೀಮಿತವಾಗಿದ್ದರಿಂದ ಇತರ ಪುಸ್ತಕಗಳ ಓದಿನಿಂದ ವಿಮುಖರಾಗಿದ್ದಾರೆ.

ಇಂದಿನ ವ್ಯಕ್ತಿಯ ಸಂಪೂರ್ಣ ವಿಕಾಸ ಸಾಧ್ಯವಾಗುತ್ತಿಲ್ಲ ಎಂದು ತಿಳಿಸಿದರು.

ತಾಲೂಕಾ ಕಸಾಪ ಅಧ್ಯಕ್ಷೆ ಡಾ. ರಶ್ಮಿ ಅಂಗಡಿ, ಉಮಾದೇವಿ ಪಾಟೀಲ ವೇದಿಕೆ ಮೇಲೆ ಉಪಸ್ಥಿತರಿದ್ದರು. ಅನಸೂಯಾ ಮಿಟ್ಟಿ ಪ್ರಾರ್ಥಿಸಿದರು. ಕಿಶೋರಬಾಬು ನಾಗರಕಟ್ಟಿ ಸ್ವಾಗತಿಸಿದರು. ಸಮಿತಿ ಸದಸ್ಯ ಸಂತೋಷ ಅಂಗಡಿ ಪ್ರಾಸ್ತಾವಿಕವಾಗಿ ಮಾತನಾಡಿದರು. ರಾಜೇಶ್ವರಿ ಬಡ್ನಿ ನಿರೂಪಿಸಿದರು.

ಮಂಜುಳಾ ವೆಂಕಟೇಶಯ್ಯ ವಂದಿಸಿದರು.

ಕಾರ್ಯಕ್ರಮದಲ್ಲಿ ಚಂದ್ರಶೇಖರ ವಸ್ತ್ರದ, ಡಾ. ಜಿ.ಬಿ. ಪಾಟೀಲ, ಸಿ.ಕೆ.ಎಚ್. ಕಡಣಿ ಶಾಸ್ತ್ರೀ, ಡಾ. ಉಮೇಶ ಪುರದ, ಎಸ್.ಐ. ಯಾಳಗಿ, ಯಲ್ಲಪ್ಪ ಹಂದ್ರಾಳ, ಎಂ.ಎಸ್. ಹುಲ್ಲೂರ, ಡಿ.ಎಸ್. ಬಾಪುರಿ, ಸತೀಶ ಚನ್ನಪ್ಪಗೌಡ್ರ, ಅಮರೇಶ ರಾಂಪೂರ, ರಾಹುಲ ಗಿಡ್ನಂದಿ, ಬಿ.ಬಿ. ಹೊಳಗುಂದಿ, ಮೀನಾಕ್ಷಿ ಮುಂಡರಗಿ, ಎಸ್.ಪಿ. ಕಲ್ಮಠ, ಎಸ್.ಎಂ. ಕಾತರಕಿ, ಭಾಗ್ಯಶ್ರೀ ಹುರಕಡ್ಲಿ, ಚಂದ್ರಕಲಾ ಇಟಗಿಮಠ, ಶಾರದಾ ಬಾಣದ, ಜಯಶ್ರೀ ಶ್ರೀಗಿರಿ, ಶಕುಂತಲಾ ಸಿಂಧೂರ, ಶಿಲ್ಪಾ ವ್ಯಾಗೇರಿ, ಶಕುಂತಲಾ ಗಿಡ್ನಂದಿ, ಬಿ.ಕೆ. ಪೂಜಾರ, ಎಂ.ಎಂ. ಕಾಗದಗಾರ, ದತ್ತಪ್ರಸನ್ನ ಪಾಟೀಲ, ಬಸವರಾಜ ನೆಲಜೇರಿ, ಮಮತಾ ದೊಡ್ಡಮನಿ, ರಾಜೇಶ್ವರಿ ಗುಜಮಾಗಡಿ, ಪಂಚಾಕ್ಷರಯ್ಯ ಹೊಂಬಾಳಿಮಠ, ಸುರೇಶ ಹಿರೇಮಠ, ಗಂಗಾ ಬೆಲೇರಿ, ಕಲಾವತಿ ಹಿರೇಮಠ, ವಿಜಯಲಕ್ಷ್ಮೀ ಕಪ್ಪರದ, ಪ್ರೇಮಾ ಚಳಗೇರಿ ಮೊದಲಾದವರು ಉಪಸ್ಥಿತರಿದ್ದರು.

ಅತಿಥಿಗಳಾಗಿ ಭಾಗವಹಿಸಿದ್ದ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಸವರಾಜ ಬಳ್ಳಾರಿ ಮಾತನಾಡಿ, ರಾಜ್ಯದಲ್ಲಿಯೇ ಗದಗ ಸಾಂಸ್ಕೃತಿಕವಾಗಿ ಶ್ರೀಮಂತವಾಗಿರುವ ಪ್ರದೇಶ. ಕುಮಾರವ್ಯಾಸ ಕನ್ನಡ ಶ್ರೇಷ್ಠ ಕವಿ. ಇಂತಹ ಪರಿಸರದಲ್ಲಿ ಓದುವ ಸಂಸ್ಕೃತಿಯನ್ನು ಬೆಳೆಸುವ ದಿಸೆಯಲ್ಲಿ ಇಲಾಖೆ ಸದಾ ಸಹಕಾರವನ್ನು ನೀಡುತ್ತದೆ. ಚೆಟ್ಟಿ ಆರ್ಟ್ ಗ್ಯಾಲರಿಯನ್ನು ಸುಸಜ್ಜಿತಗೊಳಿಸುವ ಪ್ರಯತ್ನವನ್ನು ಪ್ರಾರಂಭಿಸಿದ್ದೇನೆ ಎಂದು ತಿಳಿಸಿದರು.

**ಬೆಂಬಲ ಬೆಲೆ ಯೋಜನೆಯಡಿ ಎಫ್ ಕ್ಯೂ ಗುಣಮಟ್ಟದ ಕಡಲೆ ಖರೀದಿಗೆ ಬೆಂಬಲ ಬೆಲೆ ನಿಗದಿ**

# ಖರೀದಿ ಸಂಸ್ಥೆಗಳ ದುರುಪಯೋಗವಾಗದಿರಲಿ



ಸರ್ಕಾರದ ಮಾರ್ಗಸೂಚಿಗಳನ್ವಯ ಜಿಲ್ಲೆಯ ಪ್ರತಿ ರೈತರಿಂದ ಎಕರೆಗೆ 4 ಕ್ವಿಂಟಲ್‌ನಂತೆ ಗರಿಷ್ಠ 40 ಕ್ವಿಂಟಲ್ ಎಫ್‌ಎಕ್ಯೂ ಗುಣಮಟ್ಟದ ಕಡಲೆ ಕಾಳು ಖರೀದಿಸಲು ಹಾಗೂ ಕಡಲೆ ಕಾಳು ಖರೀದಿ ಕೇಂದ್ರಗಳಲ್ಲಿ ರೈತರ ಹೆಸರಿನಲ್ಲಿ ವರ್ತಕರು ತರುವ ಕಡಲೆ ಕಾಳು ಖರೀದಿಸದಂತೆ ಹಾಗೂ ಖರೀದಿ ಸಂಸ್ಥೆಗಳ ಯಾವುದೇ ರೀತಿಯ ದುರುಪಯೋಗವಾಗದಂತೆ ಮುನ್ನೆಚ್ಚರಿಕೆ ಕ್ರಮ ವಹಿಸಬೇಕು. ಖರೀದಿ ಪ್ರಕ್ರಿಯೆಯಲ್ಲಿ ಎಫ್‌ಎಕ್ಯೂ ಗುಣಮಟ್ಟದ ಪರಿಶೀಲನೆಗೆ ಅಧಿಕಾರಿ/ಸಿಬ್ಬಂದಿಗಳನ್ನು ಬಳಸಿಕೊಂಡು ಅಂತಹವರಿಗೆ ಸೂಕ್ತ ಗ್ರೇಡಿಂಗ್ ತರಬೇತಿ ನೀಡಲು ಖರೀದಿ ಸಂಸ್ಥೆಗಳು ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿಗಳು ಸೂಚಿಸಿದರು.

■ವಿಜಯಸಾಕ್ಷಿ ಸುದ್ದಿ, ಗದಗ

2025-26ನೇ ಸಾಲಿನ ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ಎಫ್‌ಎಕ್ಯೂ ಗುಣಮಟ್ಟದ ಕಡಲೆ ಹುಟ್ಟುವಳಿಯನ್ನು ಖರೀದಿಸಲು ಬೆಂಬಲ ಬೆಲೆ ನಿಗದಿಪಡಿಸಲಾಗಿದೆ. ನೋಂದಣಿ ಪ್ರಕ್ರಿಯೆಯಲ್ಲಿ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಲು ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ಜಿಲ್ಲಾಧಿಕಾರಿಗಳ ಸಭಾಭವನದಲ್ಲಿ ಶುಕ್ರವಾರ 2025-26ನೇ ಸಾಲಿನ ಹಿಂಗಾರು ಹಂಗಾಮಿನಲ್ಲಿ ಬೆಳೆದ ಕಡಲೆ ಹುಟ್ಟುವಳಿಯನ್ನು, ಕನಿಷ್ಟ ಬೆಂಬಲ ಬಲೆ ಯೋಜನೆಯಡಿಯಲ್ಲಿ ಖರೀದಿಸುವ ಕುರಿತು ಜರುಗಿದ ಟಾಸ್ಕ್ ಫೋರ್ಸ್ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕೃಷಿ ಮಾರಾಟ ಇಲಾಖೆಯ ಸಹಾಯಕ ನಿರ್ದೇಶಕಿ ಸುಧಾ ಬಂಡಿ ಮಾತನಾಡಿ, ಗದಗ ಜಿಲ್ಲೆಯಲ್ಲಿ ರೈತರು ಹೆಚ್ಚಿನ ಪ್ರಮಾಣದಲ್ಲಿ ಕಡಲೆ ಹುಟ್ಟುವಳಿಯನ್ನು ಬೆಳೆದಿದ್ದು, ಪ್ರಸ್ತುತ ಗದಗ, ನರಗುಂದ, ರೋಣ, ಗಜೇಂದ್ರಗಡ, ಲಕ್ಷ್ಮೇಶ್ವರ ಹಾಗೂ ಮುಂಡರಗಿ ಮಾರುಕಟ್ಟೆ ಸಮಿತಿಗಳಲ್ಲಿ ಕಡಲೆ ಹುಟ್ಟುವಳಿಯ ಆವಕ ಆಗುತ್ತಿದೆ. ಸರ್ಕಾರವು ಕಡಲೆ ಹುಟ್ಟುವಳಿಗೆ ಪ್ರತಿ ಕ್ವಿಂಟಲ್‌ಗೆ 5875 ರೂ.ಗಳಂತೆ ಕನಿಷ್ಟ ಬೆಂಬಲ ಬೆಲೆ ನಿಗದಿಪಡಿಸಿದೆ. ಕೇಂದ್ರ ಸರ್ಕಾರದ ಬೆಂಬಲ ಬೆಲೆ ಖರೀದಿ ಮಾರ್ಗಸೂಚಿಯನ್ವಯ ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾ ಮಂಡಳ (ಮಾರ್ಕ್‌ಫೆಡ್) ಸಂಸ್ಥೆಯನ್ನು ರಾಜ್ಯದ ವತಿಯಿಂದ ಖರೀದಿ ಸಂಸ್ಥೆಯನ್ನಾಗಿ ನೇಮಿಸಿದೆ. ರೈತರು ನೋಂದಣಿ ಕಾರ್ಯದ ಕಾಲಾವಧಿಯನ್ನು ಆದೇಶ ಹೊರಡಿಸಿದ ದಿನಾಂಕದಿಂದ 80 ದಿನಗಳವರೆಗೆ ಹಾಗೂ ಖರೀದಿ ಅವಧಿಯನ್ನು 90 ದಿನಗಳವರೆಗೆ ನಿಗದಿಪಡಿಸಿದೆ. ನೋಂದಣಿ ಕಾರ್ಯದ ಜೊತೆಗೆ ಖರೀದಿ ಪ್ರಕ್ರಿಯೆ ಪ್ರಾರಂಭಿಸಲಾಗುವುದು ಎಂದು ಸಭೆಗೆ ವಿವರಿಸಿದರು.

ಜಿಲ್ಲೆಯ 70 ಕಡೆಗಳಲ್ಲಿ ಕಡಲೆ ಕಾಳು ಖರೀದಿ ಕೇಂದ್ರಗಳನ್ನು ತೆರೆಯಲು ನಿರ್ಧರಿಸಲಾಯಿತು. ಈ ಸಂದರ್ಭದಲ್ಲಿ ಜಂಟಿ ಕೃಷಿ ನಿರ್ದೇಶಕಿ ಚೇತನಾ ಪಾಟೀಲ, ಆಹಾರ, ನಾಗರಿಕ ಸರಬರಾಜು ಇಲಾಖೆಯ ಉಪನಿರ್ದೇಶಕ ರಮೇಶ, ತೋಟಗಾರಿಕೆ ಇಲಾಖೆಯ ಉಪನಿರ್ದೇಶಕರು, ಮಾರ್ಕೆಟಿಂಗ್ ಫೆಡರೇಶನ್ ಶಾಖಾ ವ್ಯವಸ್ಥಾಪಕರು, ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

## 'ಶರಣ ಸಂಗಮ'ದಲ್ಲಿ ಉಪನ್ಯಾಸ ಇಂದು



■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ಫೆ. 1ರಂದು ಬೆಳಿಗ್ಗೆ 10ಕ್ಕೆ ನಡೆಯಲಿರುವ ಬಸವದಳದ 1683ನೇ ಶರಣ ಸಂಗಮದಲ್ಲಿ ಶರಣ ಮಡಿವಾಳ ಮಾಚಿದೇವರ ಜಯಂತಿ ಕುರಿತು ಉಪನ್ಯಾಸ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಅಧ್ಯಕ್ಷತೆಯನ್ನು ನಿವೃತ್ತ ಶಿಕ್ಷಕ, ಶರಣ ಎಸ್.ಎನ್. ಹಕಾರಿ ವಹಿಸುವರು. ಶರಣತತ್ವ ಚಿಂತಕಿ ಸುಜಾತಾ ಎಂ.ವಾರದ ಉಪನ್ಯಾಸ ಮಾಡುವರು. ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಭಾಗವಹಿಸಬೇಕೆಂದು ಸಂಘಟಕರ ಪರವಾಗಿ ಪ್ರಕಾಶ ಅಸುಂಡಿಯವರು ವಿನಂತಿಸಿದ್ದಾರೆ.

## ಉತ್ತರಾಖಂಡ ಏಕರೂಪ ನಾಗರಿಕ ಸಂಹಿತೆ ತಿದ್ದುಪಡಿ : ಬಲವಂತದ ವಿವಾಹ, ಲಿವ್‌ಇನ್ ಸಂಬಂಧಕ್ಕೆ 7 ವರ್ಷ ಜೈಲು

■ವಿಜಯಸಾಕ್ಷಿ ಸುದ್ದಿ, ಉತ್ತರಾಖಂಡ

ಉತ್ತರಾಖಂಡ ಏಕರೂಪ ನಾಗರಿಕ ಸಂಹಿತೆ (ತಿದ್ದುಪಡಿ) ಸುಗ್ರೀವಾಜ್ಞೆಗೆ ರಾಜ್ಯಪಾಲ ಹಾಗೂ ನಿವೃತ್ತ ಲೆಫ್ಟಿನೆಂಟ್ ಜನರಲ್ ಗುರ್ಮೀತ್ ಸಿಂಗ್ ಅವರು ಅಂಕಿತ ಹಾಕಿದ್ದಾರೆ. ಈ ತಿದ್ದುಪಡಿಯ ಪರಿಣಾಮ, ರಾಜ್ಯದಲ್ಲಿ ವಿವಾಹ ಹಾಗೂ ಲಿವ್‌ಇನ್ ಸಂಬಂಧಗಳಿಗೆ ಸಂಬಂಧಿಸಿದ ಅಪರಾಧ ಪ್ರಕರಣಗಳಲ್ಲಿ ಗರಿಷ್ಠ ಏಳು ವರ್ಷಗಳವರೆಗೆ ಜೈಲು ಶಿಕ್ಷೆ ವಿಧಿಸುವ ಅವಕಾಶ ಕಲ್ಪಿಸಲಾಗಿದೆ.

ತಿದ್ದುಪಡಿ ಕಾನೂನಿನ ಅನ್ವಯ ಬಲವಂತ, ಒತ್ತಡ ಅಥವಾ ವಂಚನೆಯ ಮೂಲಕ ವಿವಾಹ ಅಥವಾ ಲಿವ್‌ಇನ್ ಸಂಬಂಧಕ್ಕೆ ದಬ್ಬಾಳಿಕೆ ಮಾಡಿದರೆ, ಅಂತಹ ವ್ಯಕ್ತಿಗೆ ಏಳು ವರ್ಷಗಳವರೆಗೆ ಜೈಲು ಶಿಕ್ಷೆ ವಿಧಿಸಲಾಗುತ್ತದೆ. ವಿವಾಹಿತ ವ್ಯಕ್ತಿಯೊಬ್ಬನು ಕಾನೂನಾತ್ಮಕ ವಿಚ್ಛೇದನ ಪಡೆಯದೇ ಎರಡನೇ ವಿವಾಹ ಮಾಡಿಕೊಂಡರೆ ಅಥವಾ ಲಿವ್‌ಇನ್ ಸಂಬಂಧ ಬೆಳೆಸಿದರೆ, ಅದನ್ನು ಅಪರಾಧ ಕೃತ್ಯವೆಂದು ಪರಿಗಣಿಸಿ ಗರಿಷ್ಠ ಶಿಕ್ಷೆ ವಿಧಿಸಲಾಗುತ್ತದೆ.

## ರಾಜ್ಯ ಮಟ್ಟದ ವಧು-ವರರ ಸಮಾವೇಶ ಇಂದು




■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಫೆ. 1ರಂದು ಬೆಳಿಗ್ಗೆ 11ಕ್ಕೆ ಜಿಲ್ಲಾ ಚೆನ್ನದಾಸರ ಸಮಾಜದಿಂದ ಜಿಲ್ಲಾ ಚೆನ್ನದಾಸರ ಸಮಾಜದ ನೂತನ ಸಂಘದ ಉದ್ಘಾಟನೆ, ಪದಾಧಿಕಾರಿಗಳ ಪದಗ್ರಹಣ, ರಾಜ್ಯ ಮಟ್ಟದ ವಧು-ವರರ ಸಮಾವೇಶ ಮತ್ತು ಜಿಲ್ಲಾ ಚೆನ್ನದಾಸರ ಭವನ ನಿರ್ಮಾಣದ ಜಾಗೆ ಖರೀದಿಸಲು ದೇಣಿಗೆ ನೀಡುವ ದಾನಿಗಳಿಗೆ ಸನ್ಮಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಚೆನ್ನದಾಸರ ಸಮಾಜದ ಜಿಲ್ಲಾಧ್ಯಕ್ಷ ಮಂಜುನಾಥ ಹೆಬ್ಬಳ್ಳಿ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಕಾರ್ಯಕ್ರಮ ಉದ್ಘಾಟಿಸುವರು. ಓಂಕಾರೇಶ್ವರಗಿರಿಯ ಫಕೀರೇಶ್ವರ ಶಿವಾಚಾರ್ಯ ಸ್ವಾಮೀಜಿ ಸಾನ್ನಿಧ್ಯ ವಹಿಸುವರು. ಜಿಲ್ಲಾ ಚೆನ್ನದಾಸರ ಸಮಾಜದ ಜಿಲ್ಲಾಧ್ಯಕ್ಷ ಮಂಜುನಾಥ ಹೆಬ್ಬಳ್ಳಿ ಅಧ್ಯಕ್ಷತೆ ವಹಿಸುವರು. ಮಾಜಿ ಶಾಸಕ ಡಿ.ಆರ್. ಪಾಟೀಲ, ಶಾಸಕ ಸಿ.ಸಿ. ಪಾಟೀಲ, ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ಮಾಜಿ ಶಾಸಕ ಬಿ.ಆರ್. ಯಾವಗಲ್ಲ, ಕೃಷ್ಣಗೌಡ ಪಾಟೀಲ, ಯಮನೂರಪ್ಪ ದಂಡಗಿದಾಸರ, ಗಂಗಾಧರಪ್ಪ, ಬಸವರಾಜ ನಾರಾಯಣಕರ, ಬಿ.ಎಚ್. ಮಂಜುನಾಥ, ನಂದಾ ಹಣಬರಹಟ್ಟಿ, ಗೋವಿಂದರಾಜ ದಾಸರಿ, ಉಷಾ ದಾಸರ ಮುಂತಾದವರು ಭಾಗವಹಿಸುವರು ಎಂದರು.

ರಾಜ್ಯ ಮಟ್ಟದ ವಧು-ವರರ ಸಮಾವೇಶದಲ್ಲಿ ಸಮಾಜದ ಅವಿವಾಹಿತ ಯುವಕ-ಯುವತಿಯರು ತಮ್ಮ ಹೆಸರನ್ನು ನೋಂದಾಯಿಸಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಇದರ ಸದುಪಯೋಗವನ್ನು ಪಡೆದುಕೊಳ್ಳಬೇಕು ಎಂದರು.

ಪತ್ರಿಕಾಗೋಷ್ಠಿಯಲ್ಲಿ ಹೇಮಂತ ದಾಸರ, ಭೀಮಪ್ಪ ಬೇವೂರ, ಮಾರುತಿ ದಂಡಗಿದಾಸರ, ಕೃಷ್ಣಾ ದಾಸರ, ಮಹೇಶ ದಾಸರ, ಚಿದಾನಂದಪ್ಪ ಕಟ್ಟಿಮನಿ, ವಾಸುದೇವ ಚೆನ್ನದಾಸರ, ಗೋವಿಂದರಾಜ ದಾಸರ, ಎಚ್.ಎಲ್. ದಾಸರ, ರವಿ ಕಪ್ಪಲಿ ಮುಂತಾದವರು ಇದ್ದರು.

## ಸಹಕಾರಿ ಸಂಘದ ಪದಾಧಿಕಾರಿಗಳ ಆಯ್ಕೆ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪಟ್ಟಣ ಸಮಿಪದ ನಾಗಾವಿ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದ ಆಡಳಿತ ಮಂಡಳಿಯ ಚುನಾವಣೆಯಲ್ಲಿ ಅಧ್ಯಕ್ಷರಾಗಿ ಬಿ.ಆರ್. ದೇವರೆಡ್ಡಿ. ಉಪಾಧ್ಯಕ್ಷರಾಗಿ ವೀರಬಸವನಗೌಡ ರಾಮನಗೌಡ್ರ, ಸದಸ್ಯರಾಗಿ ಕೃಷ್ಣರೆಡ್ಡಿ ಗೋವಿಂದರೆಡ್ಡಿ, ದೇವಪ್ಪ ಕುರ್ತಕೋಟಿ, ರಾಜೇಸಾಬ ಕಾರಡಗಿ, ಗೋವಿಂದರೆಡ್ಡಿ ಕುಷ್ಠರೆಡ್ಡಿ, ಅಡಿವೆಪ್ಪ ಮರಿಹನುಮರೆಡ್ಡಿ, ಮಾನಪ್ಪ ತೋಟದ, ನಾರಾಯಣ ಮರೆಡ್ಡಿ, ಶೇಖಪ್ಪ ಮಾಳೋಜಿ, ಎಲ್ಲವ್ವ ಮರೆಡ್ಡಿ, ಭಾರತಿ ಮರಭರೆಡ್ಡಿ ನೂತನ ಪದಾಧಿಕಾರಿಗಳಾಗಿ ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿ ಆನಂದ ಗವಾರಿ ಹಾಗೂ ಶಾಂತಮ್ಮಾ ತಿಳಿಸಿದರು.

ಈ ಸಂದರ್ಭದಲ್ಲಿ ಪ್ರಾಥಮಿಕ ಕೃಷಿ ಪತ್ತಿನ ಕಾರ್ಯನಿರ್ವಾಹಕ ಎಂ.ಬಿ. ಮರೆಡ್ಡಿ, ಕರಿಯಪ್ಪ ಪೀಚಿ, ಪ್ರದೀಪ ಹಿರೇಮಠ, ಹೀನಾ ಕೌಸರ್ ನವಲಗುಂದ, ಸಂತೋಷ ಪಾಟೀಲ, ಬಸವರಾಜ ಛಲವಾದಿ ಇದ್ದರು.

**37ನೇ ರಾಷ್ಟ್ರೀಯ ರಸ್ತೆ ಸುರಕ್ಷತಾ ಅಭಿಯಾನದ ಅಂಗವಾಗಿ ಜಾಗೃತಿ ಜಾಥಾ**

# ತಪ್ಪದೇ ರಸ್ತೆ ನಿಯಮಗಳನ್ನು ಪಾಲಿಸಿ




■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮನುಷ್ಯನ ಜೀವ ಅತ್ಯಮೂಲ್ಯವಾಗಿದ್ದು, ವಾಹನ ಚಲಾಯಿಸುವ ಪ್ರತಿಯೊಬ್ಬರೂ ತಪ್ಪದೇ ರಸ್ತೆ ನಿಯಮಗಳನ್ನು ಪಾಲಿಸುವ ಮೂಲಕ ರಸ್ತೆ ಅಪಘಾತ, ಸಾವು-ನೋವು ತಡೆಯುವ ನಿಟ್ಟಿನಲ್ಲಿ ಜಾಗೃತರಾಗಬೇಕು ಎಂದು ಹಿರಿಯ ದಿವಾಣಿ ನ್ಯಾಯಾಧೀಶರಾದ ಭರತ ಯೋಗೇಶ ಕರಗುದರಿ ತಿಳಿಸಿದರು.

ಅವರು ಪಟ್ಟಣದಲ್ಲಿ ಶನಿವಾರ ನ್ಯಾಯಾಂಗ ಇಲಾಖೆ, ಪೊಲೀಸ್ ಇಲಾಖೆ, ಕಂದಾಯ ಇಲಾಖೆಗಳ ಸಹಯೋಗದಲ್ಲಿ 37ನೇ ರಾಷ್ಟ್ರೀಯ ರಸ್ತೆ ಸುರಕ್ಷತಾ ಅಭಿಯಾನದ ಅಂಗವಾಗಿ ಪಟ್ಟಣದ ಶಾಲಾ ಮಕ್ಕಳ ಮೂಲಕ ರಸ್ತೆ ಸುರಕ್ಷತಾ ಅಭಿಯಾನ ಜಾಗೃತಿ ಜಾಥಾ-ಕ್ಕೆ ಚಾಲನೆ ನೀಡಿ ನಂತರ ಸ್ಕೂಲ್ ಚಂದನದಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದರು.

ರಸ್ತೆ ಸುರಕ್ಷತೆಯು ಜೀವಗಳನ್ನು ಉಳಿಸಲು ಮತ್ತು ಅಪಘಾತಗಳನ್ನು ತಡೆಯಲು ಅತ್ಯಗತ್ಯವಾದ ಮುನ್ನೆಚ್ಚರಿಕೆ ಕ್ರಮವಾಗಿದೆ. ಹೆಲ್ಮೆಟ್, ಸೀಟ್ ಬೆಲ್ಟ್ ಧರಿಸುವುದು, ಸಂಚಾರ ನಿಯಮಗಳನ್ನು ಪಾಲಿಸುವುದು, ಪ್ರತಿಯೊಬ್ಬ ನಾಗರಿಕನೂ ಜವಾಬ್ದಾರಿಯುತವಾಗಿ ವರ್ತಿಸುವ ಮೂಲಕ ಸುರಕ್ಷಿತ ರಸ್ತೆ ಸಂಚಾರವನ್ನು ಮಾಡುವ ನಿಟ್ಟಿನಲ್ಲಿ ಮುಂದಾಗಬೇಕು. ಒಬ್ಬ ವ್ಯಕ್ತಿಗೆ ಅಪಘಾತವಾದರೆ ಅವರನ್ನು ಅವಲಂಬಿಸಿದ ಇಡೀ ಕುಟುಂಬಕ್ಕೆ ಹಾನಿ ಎಂಬುದನ್ನು ಅರ್ಥಮಾಡಿಕೊಳ್ಳಬೇಕು ಎಂದು ಹೇಳಿದರು. ಕಿರಿಯ ದಿವಾಣಿ ನ್ಯಾಯಾಧೀಶರಾದ ಸತೀಶ ಎಂ ಮಾತನಾಡಿ, ನಿಷ್ಕಾಳಜಿ ಮತ್ತು ಬೇಜಾವಾಬ್ದಾರಿಯಿಂದ ಅಪಘಾತಗಳು ಹೆಚ್ಚುತ್ತಿವೆ. ಹೆಲ್ಮೆಟ್, ಸೀಟ್ ಬೆಲ್ಟ್ ತಪ್ಪದೇ ಧರಿಸಬೇಕು ಎಂದು ಪೊಲೀಸ್, ಸಾರಿಗೆ ಇಲಾಖೆ ಕಡ್ಡಾಯಗೊಳಿಸುವದು ನಮ್ಮ ಸುರಕ್ಷತೆಯ ದೃಷ್ಟಿಯಿಂದ ಎನ್ನುವದನ್ನು ನಾವು ಅರಿತುಕೊಳ್ಳಬೇಕು. ಅಪ್ರಾಪ್ತ ವಯಸ್ಕರು ವಾಹನ ಚಲಾವಣೆ ಮಾಡಿ ಅಪಘಾತಗೊಳಿಸಿದರೆ ಕಾನೂನಿನ ದೃಷ್ಟಿಯಲ್ಲಿ ಅಪರಾಧದ ಜೊತೆಗೆ ದೊಡ್ಡ ಮೊತ್ತವನ್ನು ಪರಿಹಾರ ನೀಡುವ ಪ್ರಸಂಗಗಳು ನಡೆಯುತ್ತವೆ ಎಂದು ಹೇಳಿದರು.

ಸಭೆಯಲ್ಲಿ ಸಿಪಿಐ ಬಿ.ವ್ಯೆ. ನ್ಯಾಮಗೌಡ, ಪಿಎಸ್‌ಐ ನಾಗರಾಜ ಗಡಾದ ಮಾತನಾಡಿದರು. ಹಿರಿಯ ಮೋಟಾರು ವಾಹನ ನಿರೀಕ್ಷಕ ಅರುಣ ಕಟ್ಟಿಮನಿ, ಪ್ರಾಚಾರ್ಯ ರಾಮು ಜಿ ಉಪಸ್ಥಿತರಿದ್ದರು. ವಿದ್ಯಾರ್ಥಿಗಳಾದ ಗಂಗಾಧರ, ಅಶ್ವಿನಿ, ಪ್ರಿಯಾಂಕಾ ನಿರೂಪಿಸಿದರು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಸಂಸ್ಥೆಯ ಅಧ್ಯಕ್ಷ ಟಿ. ಈಶ್ವರ ಮಾತನಾಡಿ, ರಸ್ತೆ ಅಪಘಾತಗಳು ಸವಾರರ ಅಜಾಗೂರಕತೆಯ ಫಲವಾಗಿರುತ್ತವೆ. ಮಕ್ಕಳಲ್ಲಿ ರಸ್ತೆ ಸುರಕ್ಷತೆಯ ಬಗ್ಗೆ ಒಮ್ಮೆ ಅರಿವು ಮೂಡಿಸಿದಲ್ಲಿ ಅದು ಕೊನೆಯ ತನಕವೂ ಅನುಷ್ಠಾನದಲ್ಲಿರುತ್ತದೆ. ನಮ್ಮ ಶಾಲೆಯಲ್ಲಿ ನೂರಾರು ವಿದ್ಯಾರ್ಥಿಗಳು ನಿತ್ಯ ವಾಹನ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸುವದರ ಜೊತೆಗೆ ಉಳಿದವರಿಗೆ ಮಾಹಿತಿ ನೀಡುವ ಕಾರ್ಯವನ್ನು ಮಾಡುತ್ತಿದ್ದಾರೆ ಎಂದು ಹೇಳಿದರು.

**ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಗದಗ**

ಪಿನ್ ಕೋಡ್ ನಂ. 582101. ದೂರವಾಣಿ: 08372-278003.
ಇ-ಮೇಲ್: uda_gadag@hotmail.com

ಸಂ: ನಅಪ್ರಾಗಬೆ/ಭೂಬ-(69)/2025-26/1323 ದಿನಾಂಕ: 29.01.2026

**ಪ್ರಕಟಣೆ**

ಸಾರ್ವಜನಿಕರಿಗೆ ಈ ಮೂಲಕ ತಿಳಿಸುವದೇನೆಂದರೆ, ಅರ್ಜಿದಾರರಾದ **ಶ್ರೀಮತಿ ಶಾಂತಾ ಪರಪ್ಪಾ ಅಬ್ಬಿಗೇರಿ ಹಾಗೂ ಶ್ರೀಮತಿ ಸರೋಜಾ ದಿವಾಕರ ಪರಕಾಳಿ ಸಾ॥ ಗದಗ** ಈ ಕೆಳಕಂಡ ಜಮೀನನ್ನು ಭೂ ಉಪಯೋಗ ನಿಗಧಿಪಡಿಸಲು ಅರ್ಜಿ ಸಲ್ಲಿಸಿರುತ್ತಾರೆ. ಈ ಭೂ ಉಪಯೋಗ ನಿಗಧಿಪಡಿಸುವದರಿಂದ ಸ್ಥಳದಲ್ಲಿ ವಸತಿ ನಿವೇಶನಗಳನ್ನು ಮಾಡಲು ಉದ್ದೇಶಿಸಿರುತ್ತಾರೆ. ಇದರಿಂದ ಅರ್ಜಿದಾರರಿಗೆ ಹಾಗೂ ಸಾರ್ವಜನಿಕರಿಗೆ ವಸತಿ ನಿವೇಶನಗಳು ಸಿಗುತ್ತವೆ. ಇದರಿಂದ ನಗರದಲ್ಲಿ ವಸತಿ ಸಮಸ್ಯೆ ಸ್ವಲ್ಪ ಬಗೆ ಹರಿಯುತ್ತದೆ ಎಂದು ತಮ್ಮ ಅರ್ಜಿಯಲ್ಲಿ ತಿಳಿಸಿರುತ್ತಾರೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ **ಯೋಜನಾ ಕಾಯ್ದೆ 1961 ರ ಕಲಂ 69(3)ರಂತೆ** ಭೂ ಉಪಯೋಗ ನಿಗದಿಪಡಿಸುವ ಬಗ್ಗೆ ಸಾರ್ವಜನಿಕರಿಂದ ಸಲಹೆ/ಆಕ್ಷೇಪಣೆಗಳು ಏನಾದರೂ ಇದ್ದಲ್ಲಿ ಈ ಪ್ರಕಟಣೆ ಆದ ದಿನಾಂಕದಿಂದ **15 (ಹದಿನೈದು)** ದಿನಗಳೊಳಗಾಗಿ ಆಯುಕ್ತರು, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಪಿ.ಬಿ. ರೋಡ ಗದಗ-582101. ಇವರಿಗೆ ಲಿಖಿತವಾಗಿ ಸಲ್ಲಿಸಲು ಕೋರಲಾಗಿದೆ. ಅವಧಿ ಮುಗಿದ ನಂತರ ಬಂದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

| ಅ.ನ | ಗ್ರಾಮ | ರಿ.ಸ.ನಂ | ಕ್ಷೇತ್ರ | ಮಹಾ ಯೋಜನೆ ಪ್ರಕಾರ ನಿಗಧಿಪಡಿಸಿದ ಭೂ ಉಪಯೋಗ | ಅರ್ಜಿದಾರರು ಬಯಸಿರುವ ಭೂ ಉಪಯೋಗ ಬದಲಾವಣೆ |
|---|---|---|---|---|---|
| 01 | ಬೆಟಗೇರಿ | 168/*/8, 168/*/9 | ಒಟ್ಟು ಕ್ಷೇತ್ರ: 03ಎ-00ಗುಂ ಪೈಕಿ 01ಎ-22ಗುಂ | ಸಾರ್ವಜನಿಕ/ ಅರೇಸಾರ್ವಜನಿಕ | ವಸತಿ |
| | | | ಒಟ್ಟು ಕ್ಷೇತ್ರ: 03ಎ-00ಗುಂ ಪೈಕಿ 01ಎ-18ಗುಂ | ಉದ್ಯಾನವನ/ ಬಯಲುಜಾಗೆ | ವಸತಿ |

ವಾ.ಸಾ.ಇ/ಗದಗ/608/
ದೇಶಪಾಂಡೆಪಬ್ಲಿಸಿಟಿ/2025-26

ಸಹಿ/- ಆಯುಕ್ತರು
ನಗರಾಭಿವೃದ್ಧಿ ಪ್ರಾಧಿಕಾರ, ಗದಗ-ಬೆಟಗೇರಿ

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka